ಸಂಪುಟ : 8 ಸಂಚಿಕೆ : 257 ಪುಟ : 4 ಬೆಲೆ : 3.00 ಮಂಗಳವಾರ ನವ್ಹಂಬರ್ 21, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 257 Pages : 4 Price : 3.00 Tuesday November 21, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಪ್ರವಚನದ ಪೂರ್ವಭಾವಿ ಸಭೆ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಕೊಪ್ಪಳ ಸಂಸ್ಥಾನ ಮಠದ ಪರಮಪೂಜ್ಯ ಶ್ರೀ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳ ಪ್ರವಚನವನ್ನು ಗದಗ ನಗರದ ವಿದ್ಯಾದಾನ ಸಮಿತಿಯ ಶಾಲೆಯ ಮೈದಾನದಲ್ಲಿ ನ. 24ರಿಂದ ನ. 3ರವರೆಗೆ ಆಯೋಜಿಸಲಾಗಿದೆ.

ಕಾರ್ಯಕ್ರಮದ ಸಿದ್ಧತೆಗಾಗಿ ಪೂರ್ವಭಾವಿ ಸಭೆಯನ್ನು ನ.21ರಂದು ಸಂಜೆ 4 ಗಂಟೆಗೆ ಶ್ರೀ ಜಗದ್ಗುರು ಪಂಚಾಚಾರ್ಯ ಮಾಂಗಲ್ಯ ಮಂದಿರದಲ್ಲಿ ಮಾಜಿ ಶಾಸಕ ಡಿ.ಆರ್. ಪಾಟೀಲರ ಅಧ್ಯಕ್ಷತೆಯಲ್ಲಿ ಕರೆಯಲಾಗಿದೆ. ನಗರದ ಎಲ್ಲ ಸಂಘ-ಸಂಸ್ಥೆಗಳು, ಎಲ್ಲ ಸಮಾಜ ಬಾಂಧವರು ಸಭೆಗೆ ಆಗಮಿಸಿ ತಮ್ಮ ಸಲಹೆ, ಸೂಚನೆಗಳನ್ನು ನೀಡಿ ಪ್ರವಚನದ ಯಶಸ್ವಿಗೆ ಸಹಕರಿಸುವಂತೆ ಸಂಘಟಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಹುಬ್ಬಳ್ಳಿಯ ಶ್ರೀ ಸಿದ್ಧಾರೂಢ ಮಠದ ಮೇಲ್ಮನೆ ಅಧ್ಯಕ್ಷರಾಗಿ ಡಿ.ಆರ್. ಪಾಟೀಲ



■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಶ್ರೀ ಸಿದ್ಧಾರೂಢ ಮಠದ ಆಜೀವ ಸದಸ್ಯರು, ಆಶ್ರಯದಾತರು, ಪೋಷಕರ ಮನೆ(ಮೇಲ್ಮನೆ) ಅಧ್ಯಕ್ಷನ್ನಾಗಿ ಗದುಗಿನ ಮಾಜಿ ಶಾಸಕ ಡಿ.ಆರ್. ಪಾಟೀಲ, ಉಪಾಧ್ಯಕ್ಷರನ್ನಾಗಿ ಬೆಳಗಾವಿ ಜಿಲ್ಲೆಯ ಮೂಡಲಗಿ ತಾಲೂಕಿನ ತುಕ್ಕಾನಟ್ಟಿಯ ಬಿ.ಆರ್. ಬಾಗೇವಾಡಿ ಅವರನ್ನು ಆಯ್ಕೆ ಮಾಡಲಾಗಿದೆ.

ಧಾರವಾಡದ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಶ್ರೀ ಸಿದ್ಧಾರೂಢ ಮಠದ ಟ್ರಸ್ಟ್ ಕಮಿಟಿ ಮುಖ್ಯ ಆಡಳಿತಗಾರರಾಗಿರುವ ಕೆ.ಜಿ ಶಾಂತಿ ಅವರು ಶ್ರೀಮಠದ ಟ್ರಸ್ಟಿನ ಗೊತ್ತುವಳಿ ಮೇರೆಗೆ ಟ್ರಸ್ಟಿನ ಅವಧಿಯವರೆಗೆ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಗದಗ ತಾಲೂಕಿನ ಹುಲಕೋಟಿ ಗ್ರಾಮದ ಡಿ.ಆರ್. ಪಾಟೀಲ ಅವರು ಬಿಇ ಮೆಕ್ಯಾನಿಕಲ್ ಪದವೀಧರರಾಗಿದ್ದು, ಗದಗ ಮತಕ್ಷೇತ್ರದ ಶಾಸಕರಾಗಿ 4 ಅವಧಿಗೆ ಸೇವೆ ಸಲ್ಲಿಸಿದ್ದಾರೆ. ಅಲ್ಲದೇ, ಸಂತ ರಾಜಕಾರಣಿ ಎಂದೇ ಗುರುತಿಸಿಕೊಂಡಿದ್ದಾರೆ. ರಾಜ್ಯ ಮತ್ತು ರಾಷ್ಟ್ರಮಟ್ಟದ ಸಹಕಾರ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸಿರುವ ಅವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಸಹಕಾರ, ಎಪಿಎಂಸಿ, ಶಿಕ್ಷಣ ಹಾಗೂ ಧಾರ್ಮಿಕ ಕ್ಷೇತ್ರಗಳಲ್ಲಿ ತಮ್ಮನ್ನು ತಾವು ಗುರುತಿಸಿಕೊಂಡಿದ್ದಾರೆ.

## ನೀರು ಪೂರೈಕೆ ಮಾಹಿತಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ನವೆಂಬರ್ 21 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 22ರಲ್ಲಿ ಲಿಡ್ಕರ್ ಬಡಾವಣೆ, ಟವರ್ ಕಂಬ, ಕಮತರ ಪ್ಲಾಟ್, ಶಿಗ್ಗಾಂವಿ ಲೇಔಟ್, ಕರುಗಲ್ ಲೇಔಟ್, ವಾಲ್ಮೀಕಿ ಭವನ, ವಿಜಯನಗರ ಬಡಾವಣೆ, ಕೆಲವು ಉಳಿದ ಭಾಗಗಳು,

ವಾರ್ಡ್ ನಂ. 16, 21 ಕುಂಬೇಶ್ವರ ನಗರ, ಭಾಗ-1,2,3,4 ಸುಣ್ಣದ ಭಟ್ಟಿ ಭಾಗ-1,2,3 ಕುಷ್ಟರೋಗ ಕಾಲೋನಿ ಭಾಗ-1,2 ಅಂಬೇಡ್ಕರ ನಗರ ಭಾಗ-1,2 ವಾರ್ಡ್ ನಂ. 35ರಲ್ಲಿ ನೀಲಮ್ಮತಾಯಿ ಮಠ, ಸುತ್ತಮುತ್ತಲಿನ ಕೆಲವು ಭಾಗಗಳು, ವಾರ್ಡ್ ನಂ. 29ರಲ್ಲಿ ಡಂಬಳವರ ಲೈನ, ಮಸೂತಿ ಲೈನ್, ಕಲಾಮಂದಿರ ರೋಡ್, ರಾಜೀವಗಾಂಧಿನಗರ ಕೆಲವು ಭಾಗಗಳು,

ವಾರ್ಡ್ ನಂ. 5,6ರಲ್ಲಿ ಶಿವನಾಗ ನಗರ, ಭಾಗ-1,2,3,4 ಗಣೇಶನಗರ ಭಾಗ-1,2,3,4, ಫಣಿಬಂದ ಅವರ ಲೈನ್, ತಟ್ಟಿಯವರ ಲೈನ್, ನಾವಳ್ಳಿಯವರ ಲೈನ್, ಮಳಲಿಯವರ ಲೈನ್, ಪೂಜಾರ ಲೈನ್, ಖಾನಾಪೂರ ಲೈನ್, ಪವಾರವರ ಲೈನ್, ಪಿ.ಪಿ.ಗುಡಿ ಲೈನ್, ಜಾಲಿಹಾಳ ಅವರ ಲೈನ್, ಮಿಸ್ಕಿನ್ ಅವರ ಲೈನ್, ಮತ್ತು ಪ್ಲಾಟ್‌ನಲ್ಲಿ,

ವಾರ್ಡ್ ನಂ. 4ರಲ್ಲಿ ಟರ್ನಲ್ ಪೇಟೆ ಪೂರ್ಣ ಭಾಗ-1 ಮಾಜಿ ಮೇಂಬರ್ ಲೈನ್, ಗೌರಿ ಗುಡಿ ಲೈನ್, ಬಾಳಿಕಾಯಿವರ ಲೈನ್, 275 ಮನೆ ಲೈನ್, 200 ಮನೆ ಲೈನ್, ಪಾಂಡ್ರೆಯವರ ಮನೆ ಲೈನ್, ಬಿ.ಎಸ್.ಎನ್.ಎಲ್. ಆಫೀಸ್ ಪೂರ್ಣ ಭಾಗ, ಗಾರ್ಡನ್ ಲೈನ್, ಸುಣ್ಣದ ಭಟ್ಟಿ ಲೈನ್, ಕಣವಿ ಪ್ಲಾಟ್, ಪೂರ್ಣ ಭಾಗಗಳು.

ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನಮ್ಮ ಸ್ಮಾರಕ ದರ್ಶನ ಮತ್ತು ಸಂರಕ್ಷಣೆಗಾಗಿ ಪ್ರವಾಸ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ.ಪಾಟೀಲ

# 60 ಸ್ಮಾರಕಗಳ ಸಂರಕ್ಷಣೆಗೆ ಶೀಘ್ರ ಅಧಿಸೂಚನೆ



■ವಿಜಯಸಾಕ್ಷಿ ಸುದ್ದಿ, ಬಾಗಲಕೋಟೆ

ಸಂರಕ್ಷಣೆಗೆ ಆಯ್ಕೆ ಮಾಡಲಾದ 60 ಸ್ಮಾರಕಗಳ ಸಂರಕ್ಷಣೆಗೆ ಡಿಸೆಂಬರ್ 30 ರೊಳಗಾಗಿ ಅಧಿಸೂಚನೆ ಹೊರಡಿಸಲಾಗುತ್ತಿದೆ ಎಂದು ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ ಹೇಳಿದರು.

ನಮ್ಮ ಸ್ಮಾರಕ ದರ್ಶನ ಮತ್ತು ಸಂರಕ್ಷಣೆಗಾಗಿ ಪ್ರವಾಸ ಕಾರ್ಯಕ್ರಮದಡಿ ಸೋಮವಾರ ಪ್ರವಾಸೋದ್ಯಮ ತಾಣ ಐಹೊಳೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಅಲ್ಲಿರುವ ಸ್ಮಾರಕಗಳನ್ನು ವೀಕ್ಷಣೆ ಮಾಡಿ ಮಾತನಾಡಿದ ಅವರು, ಈಗಾಗಲೇ ಭಾರತೀಯ ಪುರಾತತ್ವ ಇಲಾಖೆಯಿಂದ ಅರ್ಧದಷ್ಟು ಸ್ಮಾರಕಗಳ ಸಂರಕ್ಷಣೆಗೆ ತೆಗೆದುಕೊಂಡಿದ್ದು, ರಾಜ್ಯಕ್ಕೆ ಸಂಬಂಧಿಸಿದ 61 ಸ್ಮಾರಕಗಳ ಪೈಕಿ ಈಗಾಗಲೇ ಒಂದಕ್ಕೆ ಅಧಿಸೂಚನೆ ಹೊರಡಿಸಲಾಗಿದೆ. ಉಳಿದ 60 ಸ್ಮಾರಕ ಸಂರಕ್ಷಣೆಗೆ ಡಿಸೆಂಬರ್ 30 ರೊಳಗಾಗಿ ಅಧಿಸೂಚನೆ ಹೊರಡಿಸಲಾಗುತ್ತಿದೆ ಎಂದು ತಿಳಿಸಿದರು.

ಐಹೊಳೆ ಪ್ರವಾಸಿ ತಾಣಗಳಲ್ಲಿ ಬಹಳಷ್ಟು ದಿನಗಳಿಂದ ಸ್ಮಾರಕಗಳಲ್ಲಿ ಕುಟುಂಬಗಳು ವಾಸವಾಗಿದ್ದಾರೆ. ತಮಗೆ ಬೇಕಾದ ರೀತಿಯಲ್ಲಿ ಅವುಗಳನ್ನು ಉಪಯೋಗಿಸಿಕೊಂಡಿದ್ದು, ಬೇರೆಡೆ ನಿವೇಶನ ನೀಡಿದಲ್ಲಿ ಸ್ಥಳಾಂತವಾಗಲು ಎಲ್ಲ ರೀತಿಯ ಸಹಕಾರ ಸಹ ನೀಡುತ್ತಿದ್ದಾರೆ. ಸ್ಮಾರಕಗಳಲ್ಲಿ ವಾಸವಾಗಿರುವ ಕುಟುಂಬಗಳನ್ನು ಸ್ಥಳಾಂತರಿಸಿ ಅವುಗಳನ್ನು ಅಭಿವೃದ್ಧಿಪಡಿಸಲು ಸರಕಾರ ತಿರ್ಮಾನಿಸಿದೆ. ಬರುವ ಜನೆವರಿ ಅಂತ್ಯದೊಳಗಾಗಿ ಐಹೊಳೆ ಗ್ರಾಮದ 124 ಕುಟುಂಬಗಳಿಗೆ ನಿವೇಶನ ನೀಡಲು ಭೂಮಿ ಖರೀದಿ ಕಾರ್ಯ ನಡೆಯಲಿದೆ ಎಂದರು.

ಐಹೊಳೆ ಗ್ರಾಮ ಸಂಪೂರ್ಣ ಸ್ಥಳಾಂತರ ಕುರಿತ ಪ್ರಸ್ತಾವನೆ ಈಗಾಗಲೇ ಸರಕಾರದ ಬಳಿ ಇದ್ದು, ಈ ಬಗ್ಗೆ ಚರ್ಚಿಸಿ ಹೆಚ್ಚುವರಿ ಭೂಮಿ ಖರೀದಿಗೆ ಕಂದಾಯ ಇಲಾಖೆಯ ಜೊತೆಗೆ ಡಿಸೆಂಬರ್ 15 ರೊಳಗಾಗಿ ತೀರ್ಮಾನ ಕೈಗೊಳ್ಳಲಾಗುವುದು. ಈಗಾಗಲೇ ಇಲ್ಲಿಯ ಐತಿಹಾಸಿಕ ತಾಣಗಳ ಅಭಿವೃದ್ದಿಗೆ ಚಾಲುಕ್ಯ ಪ್ರಾಧಿಕಾರ ಇದ್ದು, ಅದರ ಮೂಲಕ ಯಾವ ರೀತಿಯಲ್ಲಿ ಅಭಿವೃದ್ದಿ ಪಡಿಸುವುದು ಎಂಬ ನಿಟ್ಟಿನಲ್ಲಿ ಹಿರಿಯ ಅಧಿಕಾರ ಜೊತೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುತ್ತಿದೆ. ಸ್ಮಾರಕಗಳಂತಹ ದೊಡ್ಡ ಸಂಪತ್ತು ಸಿಗುವುದು ಬಹಳ ವಿರಳ.

▶▶3 ನೇ ಪುಟಕ್ಕೆ

### ಸ್ಮಾರಕ ವೀಕ್ಷಣೆ ಮಾಡಿದ ಸಚಿವ ಪಾಟೀಲ

ಐಹೊಳೆ ಪ್ರವಾಸಿ ತಾಣಕ್ಕೆ ಭೇಟಿ ನೀಡಿದ ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ ದೇಸಾಯಿ ವಾಡೆಯ ಪಕ್ಕದಲ್ಲಿರುವ ಬಸವೇಶ್ವರ ದೇಸ್ಥಾನಕ್ಕೆ ತೆರಳಿ ದರ್ಶನ ಪಡೆದು ಸ್ಮಾರಕಗಳ ವೀಕ್ಷಣೆಗೆ ತೆರಳಿದರು. ಸ್ಮಾರಕಗಳಲ್ಲಿ ವಾಸವಾಗಿರುವ ಮನೆಗಳಿಗೆ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಯನ್ನು ವೀಕ್ಷಣೆ ಮಾಡಿದರು. ಸ್ಮಾರಕಗಳಲ್ಲಿ ವಾಸಿಸುತ್ತಿರುವ ಕುಟುಂಬಗಳು ಬೇರೆಡೆ ಜಾಗ ನೀಡಿದಲ್ಲಿ ಸ್ಥಳಾಂತರಕ್ಕೆ ಎಲ್ಲ ರೀತಿಯ ಸಹಕಾರ ನೀಡುವುದಾಗಿ ತಿಳಿಸಿದರು. ಅಲ್ಲದೇ ಪ್ರವಾಸಿ ಮಾರ್ಗದರ್ಶಿ ಕೊಟ್ರೇಶ್ ಅವರು ಐಹೊಳೆ ಪ್ರವಾಸಿ ತಾಣಗಳಲ್ಲಿರುವ ದೇವಾಲಯ, ಸ್ಮಾರಕಗಳ ಮಾಹಿತಿಯನ್ನು ಸಚಿವರಿಗೆ ನೀಡಿದರು.



### ವಿವಿಧ ಕಾಲೇಜುಗಳ ಪ್ರಾಚಾರ್ಯರೊಂದಿಗೆ ಸಭೆ ಜರುಗಿಸಿದ ಜಿಲ್ಲಾ ಚುನಾವಣಾಧಿಕಾರಿಗಳು

# ಅರ್ಹ ಯುವ ಮತದಾರರ ಹೆಸರು ಸೇರ್ಪಡೆಗೆ ಕ್ರಮ ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಪಿಯು ಕಾಲೇಜು ಸೇರಿದಂತೆ ವಿವಿಧ ಕಾಲೇಜುಗಳಲ್ಲಿನ 17 ವರ್ಷ ಮೇಲ್ಪಟ್ಟ ವಿದ್ಯಾರ್ಥಿಗಳ ಹೆಸರುಗಳನ್ನು ವೋಟರ್ ಹೆಲ್ಪ್‌ಲೈನ್ ಆ್ಯಪ್‌ನಲ್ಲಿ ಫಾರ್ಮ್-6ರ ಮೂಲಕ ದಾಖಲಿಸಬೇಕು. 18 ವರ್ಷ ಪೂರ್ಣಗೊಂಡ ಅರ್ಹ ಯುವ ಮತದಾರರ ಹೆಸರು, ಮತದಾರರ ಯಾದಿಗಳಲ್ಲಿ ಹೆಸರು ಇಲ್ಲದವರು ತಮ್ಮ ಹೆಸರುಗಳನ್ನು ನಮೂನೆ-6ರಲ್ಲಿ ದಾಖಲಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಮತದಾರರ ಪಟ್ಟಿ ಪರಿಷ್ಕರಣೆ, ಯುವ ಮತದಾರರ ನೊಂದಣಿ ಕುರಿತು ಜಿಲ್ಲೆಯ ಪಿಯು ಕಾಲೇಜು, ಪದವಿ ಕಾಲೇಜು, ಇಂಜಿನಿಯರಿಂಗ್ ಸೇರಿದಂತೆ ವಿವಿಧ ಕಾಲೇಜುಗಳ ಪ್ರಾಚಾರ್ಯರೊಂದಿಗೆ ಸಭೆ ಜರುಗಿಸಿ ಮಾತನಾಡಿದರು.



ಆಯಾ ಕಾಲೇಜುಗಳಲ್ಲಿ 17 ವರ್ಷ ತುಂಬಿದ ಹಾಗೂ 18 ವರ್ಷ ಮೇಲ್ಪಟ್ಟ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಜನ್ಮ ದಿನಾಂಕದ ದಾಖಲೆ ಸೇರಿದಂತೆ ಸರಿಯಾದ ದಾಖಲೆಗಳನ್ನು ತರಿಸಿಕೊಂಡು ಹೆಸರು ದಾಖಲಿಸಬೇಕು. ಯಾವೊಬ್ಬ ಅರ್ಹ ಯುವ ಮತದಾರರ ಹೆಸರೂ ಬಿಟ್ಟುಹೋಗದಂತೆ ಕಾಲೇಜಿನ ಮುಖ್ಯಸ್ಥರು ಕ್ರಮ ವಹಿಸಬೇಕು. ನವೆಂಬರ್ 23ರೊಳಗೆ ಹೆಸರು ಅಪ್‌ಲೋಡ್ ಮಾಡುವ ಕಾರ್ಯ ಪೂರ್ಣಗೊಳ್ಳಬೇಕು. ಈ ಪ್ರಕ್ರಿಯೆಯಲ್ಲಿ ವಿಳಂಬವಾಗಬಾರದು ಎಂದು ಕಾಲೇಜಿನ ಮುಖ್ಯಸ್ಥರಿಗೆ ಸೂಚಿಸಿದರು.

ಗದಗ ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳಾದ 65-ಶಿರಹಟ್ಟಿ (ಪ.ಜಾ), 66-ಗದಗ, 67-ರೋಣ ಮತ್ತು 68-ನರಗುಂದ ಇವುಗಳಿಗೆ ಸಂಬಂಧಿಸಿದಂತೆ ಕರಡು ಮತದಾರರ ಯಾದಿಗಳನ್ನು ಈಗಾಗಲೇ ಮುಖ್ಯ ಚುನಾವಣಾಧಿಕಾರಿಗಳ ವೆಬ್‌ಸೈಟ್ www.ceokarnataka.kar.nic.inನಲ್ಲಿ ಈಗಾಗಲೇ ಪ್ರಕಟಿಸಲಾಗಿದೆ ಎಂದು ತಿಳಿಸಿದರು.

ಮತದಾರ ಪಟ್ಟಿಯಲ್ಲಿ ಹೊಸದಾಗಿ ಹೆಸರನ್ನು ಸೇರ್ಪಡೆ ಮಾಡಲು ನಮೂನೆ-6ರಲ್ಲಿ ಅರ್ಜಿ ಸಲ್ಲಿಸುವ ಅರ್ಜಿದಾರರು ಅರ್ಜಿಗೆ ಇತ್ತೀಚಿನ ಪಾಸ್‌ಪೋರ್ಟ್ ಸೈಜ್ ಪೋಟೋ ಹಾಗೂ ವಿಳಾಸದ ಬಗ್ಗೆ ದಾಖಲೆಗಳು ಹಾಗೂ ವಯಸ್ಸಿನ ಬಗ್ಗೆ ದಾಖಲೆಗಳನ್ನು ನೀಡಲು ತಿಳಿಸಲಾಗಿದೆ.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ ಯೋಜನಾಧಿಕಾರಿ ನಿರ್ಮಲಾ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಸೇರಿದಂತೆ ವಿವಿಧ ಪಿಯು ಕಾಲೇಜು, ಪದವಿ ಕಾಲೇಜು, ಇಂಜಿನಿಯರಿಂಗ್ ಕಾಲೇಜುಗಳ ಮುಖ್ಯಸ್ಥರು ಹಾಜರಿದ್ದರು.

01-01-2024ಕ್ಕೆ ಇರುವಂತೆ 18 ವರ್ಷ ಪೂರ್ಣಗೊಂಡಿರುವವರು, ಮತದಾರರ ಯಾದಿಗಳಲ್ಲಿ ಹೆಸರು ಇಲ್ಲದವರು ಈ ಅವಧಿಯಲ್ಲಿ ತಮ್ಮ ಹೆಸರುಗಳನ್ನು ನಮೂನೆ ನಂ-6ರಲ್ಲಿ ಸಲ್ಲಿಸಬಹುದು ಹಾಗೂ 2024ನೇ ವರ್ಷದ ಅರ್ಹತಾ ದಿನಾಂಕಗಳಾದ 1ನೇ ಏಪ್ರಿಲ್, 2024, 1ನೇ ಜುಲೈ, 2024 ಅಥವಾ 1ನೇ ಅಕ್ಟೋಬರ್, 2024ನೇದ್ದಕ್ಕೆ 18 ವರ್ಷ ವಯಸ್ಸು ಪೂರ್ಣಗೊಳ್ಳುವವರು, ಕರಡು ಮತದಾರ ಪಟ್ಟಿ ಪ್ರಕಟಣೆ ದಿನಾಂಕದಿಂದ ನಮೂನೆ-6ರಲ್ಲಿ ಸೇರ್ಪಡೆಗೊಳಿಸಲು ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಇಂತಹ ಅರ್ಜಿಗಳನ್ನು ಆಯಾ ತ್ರೈಮಾಸಿಕಗಳಲ್ಲಿ ಅರ್ಹತೆಯನ್ನು ಪರಿಶೀಲಿಸಿ ನಿಯಮಾನುಸಾರ ನೋಂದಣಿ ಮಾಡಿಕೊಳ್ಳಲಾಗುವುದು.

### ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಪ್ರಗತಿ ಪರಿಶೀಲನಾ ಸಭೆ

## ಕಾರ್ಯ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಜರುಗಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಕ್ಕಳ ರಕ್ಷಣಾ ಸಮಿತಿ ಸಭೆಗಳು ಪರಿಣಾಮಕಾರಿಯಾಗಿ ಜರುಗಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇಂದಿನ ಮಕ್ಕಳು ಸಮಾಜದಲ್ಲಿ ಮುಂದೆ ಸತ್ಪ್ರಜೆಗಳಾಗಿ ಆರೋಗ್ಯಯುತ ಜೀವನ ನಡೆಸಬೇಕು. ಈ ದೃಷ್ಟಿಯಲ್ಲಿ ಮಕ್ಕಳ ರಕ್ಷಣಾ ಘಟಕ ತನ್ನ ಕಾರ್ಯ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಜರುಗಿಸಬೇಕು ಎಂದು ಹೇಳಿದರು.

▶▶3 ನೇ ಪುಟಕ್ಕೆ

### ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಸೂಚನೆ

## ಸೌಲಭ್ಯಗಳನ್ನು ತಲುಪಿಸುವಲ್ಲಿ ವಿಳಂಬವಾಗಬಾರದು



■ವಿಜಯಸಾಕ್ಷಿ ಸುದ್ದಿ, ಗದಗ

ಅಂಗನವಾಡಿ ಕೇಂದ್ರಗಳಲ್ಲಿ ಪೌಷ್ಟಿಕ ಹಾಗೂ ಗುಣಮಟ್ಟದ ಆಹಾರ ವಿತರಣೆಯಲ್ಲಿ ಲೋಪ-ದೋಷಗಳಾಗದಂತೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಸಮಿತಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು. ಸರ್ಕಾರದಿಂದ ಅನುಷ್ಠಾನಗೊಂಡ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಮಹಿಳೆಯರಿಗೆ ಮತ್ತು ಮಕ್ಕಳಿಗೆ ತಲುಪಿಸುವಲ್ಲಿ ವಿನಾಕಾರಣ ವಿಳಂಬವಾಗಬಾರದು ಎಂದರು.

ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಗುಣಮಟ್ಟದ ಹಾಗೂ ಪೌಷ್ಟಿಕ ಆಹಾರ ಪೂರೈಕೆ, ಶುದ್ಧ ಕುಡಿಯುವ ನೀರು ಹಾಗೂ ಮೂಲಭೂತ ಸೌಕರ್ಯಗಳು ಇರುವಂತೆ ನೋಡಿಕೊಳ್ಳಬೇಕು. ಒಟ್ಟಾರೆಯಾಗಿ ಅಂಗನವಾಡಿ ಕೇಂದ್ರಗಳಲ್ಲಿನ ಮಕ್ಕಳ ಸಮಗ್ರ ಬೆಳವಣಿಗೆಗೆ ಸಮರ್ಪಕ ವಾತಾವರಣ ಕಲ್ಪಿಸುವುದು ಮುಖ್ಯ ಗುರಿಯಾಗಿದೆ. ಈ ನಿಟ್ಟಿನಲ್ಲಿ ಸಂಬಂಧಿತ ಅಧಿಕಾರಿಗಳು ಹೆಚ್ಚಿನ ಗಮನ ಹರಿಸಬೇಕು. ಇಲ್ಲದಿದ್ದಲ್ಲಿ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಅಧಿಕಾರಿಗಳಿಗೆ ಎಚ್ಚರಿಸಿದರು.

▶▶3ನೇ ಪುಟಕ್ಕೆ

## ಲೋಕಾಯುಕ್ತರಿಂದ ದೂರು ಸ್ವೀಕಾರ ಇಂದು

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ನ.21ರಂದು ಶಿರಹಟ್ಟಿಯ ತಹಸೀಲ್ದಾರ ಕಾರ್ಯಾಲಯದಲ್ಲಿ ತಾಲೂಕಿನ ಸಾರ್ವಜನಿಕರಿಂದ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 2ಗಂಟೆಯವರೆಗೆ ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ಮತ್ತು ಶಿರಹಟ್ಟಿ ಪೊಲೀಸ್ ನಿರೀಕ್ಷಕರು ದೂರು ಸ್ವೀಕಾರ ಮಾಡಲಿದ್ದಾರೆ.

ಯಾವುದೇ ಸರ್ಕಾರಿ ಅಧಿಕಾರಿ/ನೌಕರರು ಸರ್ಕಾರಿ ಸೇವೆ ಒದಗಿಸುವಲ್ಲಿ ಲಂಚಕ್ಕೆ ಬೇಡಿಕೆ ಇಟ್ಟಲ್ಲಿ, ಅನಾವಶ್ಯಕ ವಿಳಂಬ ಮಾಡುತ್ತಿದ್ದಲ್ಲಿ, ಯಾವುದಾದರೂ ಸರ್ಕಾರಿ ಭೂಮಿಗಳ ಒತ್ತುವರಿಯಾಗಿದ್ದಲ್ಲಿ, ಕಾಮಗಾರಿಗಳಲ್ಲಿ ಅಕ್ರಮ ಅಥವಾ ಕಳಪೆ ಕಾರ್ಯ ನಡೆದಿದ್ದಲ್ಲಿ ಆ ಬಗ್ಗೆ ದೂರು ನೀಡಬಹುದಾಗಿದ್ದು, ತಾಲೂಕಿನ ಸಾರ್ವಜನಿಕರು ಹಾಗೂ ಸಂಘ-ಸಂಸ್ಥೆಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಲೋಕಾಯುಕ್ತ ಡಿಎಸ್‌ಪಿ ವಿಜಯ ಬಿರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೇಂದ್ರ ಸರ್ಕಾರದ ರೈತ ವಿರೋಧಿ ಕಾನೂನು ರದ್ದತಿಗೆ ಆಗ್ರಹಿಸಿ ನ. 26ರಿಂದ ಪ್ರತಿಭಟನೆ




■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರಕಾರದ ರೈತ ವಿರೋಧಿ ಮೂರು ಕರಾಳ ಕಾನೂನು ರಾಜ್ಯದಲ್ಲಿ ಇನ್ನು ರದ್ದುಗೊಂಡಿಲ್ಲ. ಈ ಹಿನ್ನೆಲೆಯಲ್ಲಿ ಎಲ್ಲ ರೈತ ಹಾಗೂ ಕಾರ್ಮಿಕ ಸಂಘಟನೆಗಳ ಸಹಯೋಗದಲ್ಲಿ ನ. 26ರಿಂದ 28ರ ವರೆಗೆ ಬೆಂಗಳೂರು ಚಲೋ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ರೈತ ಸಂಘದ ಉಪಾಧ್ಯಕ್ಷ ಮಲ್ಲಿಕಾರ್ಜುನಗೌಡ ಸಂಕನಗೌಡ ಹೇಳಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಂಗಳೂರಿನ ಫ್ರೀಡಂ ಪಾರ್ಕ್ ಮತ್ತು ಗಾಂಧಿ ಭವನದಲ್ಲಿ ಪ್ರತಿಭಟನೆ ನಡೆಯಲಿದೆ.

ರೈತ ಸಂಘಟನೆಗಳ ಎಲ್ಲ ಬಣಗಳು ಒಗ್ಗಟ್ಟಿನಿಂದ ಈ ಹೋರಾಟವನ್ನು ಬೆಂಬಲಿಸಲಿದ್ದಾರೆ ಎಂದ ಅವರು ಜಿಲ್ಲೆಯಿಂದ ಒಂದು ಸಾವಿರಕ್ಕೂ ಹೆಚ್ಚು ರೈತರು ಬಸ್, ರೈಲ್ವೆ ಮೂಲಕ ಬೆಂಗಳೂರಿಗೆ ತೆರಳಲಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರೈತ ಸಂಘಟನೆಗಳ ಮುಖಂಡರಾದ ವಿಜಯಕುಮಾರ ಸುಂಕದ, ಮೇಘರಾಜ ಬಾವಿ, ಎಸ್.ಎನ್. ಪರಡ್ಡಿ, ಶರಣಪ್ಪ ಹುಲ್ಲೂರ, ಮಲ್ಲಿಕಾರ್ಜುನ ಶೀಲವಂತರ, ಸಂಗಣ್ಣ ದಂಡಿನ ಇತರರು ಉಪಸ್ಥಿತರಿದ್ದರು.

## ಸಾಕ್ಷಿ ಸುಭಾಷಿತ

ನಾಯಕತ್ವ ಒಂದು ಅವಕಾಶವಲ್ಲ; ಅದೊಂದು ಗೌರವ; ಒಂದು ಧರ್ಮದರ್ಶಿತ್ವ,

–ಅಂಡ್ರೆ ಮಾರೋಯಿಸ್

## ಸಂಪಾದಕೀಯ

# ಜನಪ್ರತಿನಿಧಿಗಳು ಜನರ ಮತಿ ಅರಿಯಲಿ

ಕೊಪ್ಪಳ ಜಿಲ್ಲೆಯ ಕುಷ್ಟಗಿ ವಿಧಾನಸಭೆ ಮತಕ್ಷೇತ್ರದ ಮಾಜಿ ಶಾಸಕ ಅಮರೇಗೌಡ ಬಯ್ಯಾಪುರ ಅವರದ್ದೆ ಎನ್ನಲಾಗುತ್ತಿರುವ ಆಡಿಯೋ ಸಂಭಾಷಣೆ, ಹೊಸ ಚರ್ಚೆಗೆ ವೇದಿಕೆಯಾಗಿದೆ. ಅತ್ಯಾಚಾರದ ಕುರಿತಾಗಿ ಜನಪ್ರತಿನಿಧಿಯಾಗಿದ್ದವರು ಆಡಿದ ಮಾತುಗಳನ್ನು ನಾಗರಿಕ ಸಮಾಜ ಒಪ್ಪಿಕೊಳ್ಳಲು ಸಾಧ್ಯವಿಲ್ಲ. ಅದರಲ್ಲೂ ನ್ಯಾಯಕ್ಕಾಗಿ ಮೊರೆ ಇಟ್ಟವರಿಗೆ ಸಾಂತ್ವನ ಹೇಳುವ ಬದಲು ಅತ್ಯಾಚಾರ ಹೇಗೆ ನಡೆಯುತ್ತದೆ ಎಂದು ತಮ್ಮ ಮತಿ ಬಳಸಿ ಆಡಿರುವ ಮಾತುಗಳನ್ನು ಅವರೇ ಮತ್ತೊಮ್ಮೆ ಕೇಳಿಕೊಳ್ಳಬೇಕಾಗಿದೆ.ಅತ್ಯಾಚಾರ ಒಬ್ಬನಿಂದ ಆಗುವುದಿಲ್ಲ, ಒಂದೇ ಕೈಯಿಂದ ಚಪ್ಪಾಳೆ ತಟ್ಟಲು ಸಾಧ್ಯವಿಲ್ಲ ಎನ್ನುವ ಬಾಲಿಶ ಹೇಳಿಕೆ ನೀಡುವ ಮುನ್ನ ಯಾರೇ ಆಗಲಿ ಒಂದು ಕ್ಷಣ ಯೋಚನೆ ಮಾಡಬೇಕು. ಮಾಜಿ ಶಾಸಕರೊಬ್ಬರು ಹೇಳಿದ್ದಾರೆ ಎನ್ನುವುದರ ಬದಲಾಗಿ ಯಾರೇ ಅಂಥ ಮಾತುಗಳನ್ನು ಆಡಬೇಕಾದರೂ ತುಸು ಯೋಜನೆ ಮಾಡುವ ಅಗತ್ಯವಿದೆ. ಮುಖ್ಯವಾಗಿ ಹೆಣ್ಣನ್ನು ಪೂಜಿಸುವ ದೇಶದಲ್ಲಿ ಇಂಥ ಹೇಳಿಕೆ ನೀಡುವ ಮೂಲಕ ಅದೇ ಹೆಣ್ಣನ್ನು ಅಪಮಾನಗೊಳಿಸುವ ಕೆಲಸ ಆಗಬಾರದು. ದೇಶದಲ್ಲಿ ಪ್ರತಿನಿತ್ಯ ಒಂದಿಲ್ಲೊಂದು ಕಡೆ ಅತ್ಯಾಚಾರದ ವರದಿಗಳಾಗುತ್ತವೆ. ಆ ಬಗ್ಗೆ ವ್ಯಾಪಕ ಆಕ್ರೋಶವೂ ವ್ಯಕ್ತವಾಗುತ್ತದೆ. ಇದರ ಮಧ್ಯೆ ಅತ್ಯಾಚಾರಕ್ಕೆ ಮಹಿಳೆಯೂ ಕಾರಣ ಎನ್ನುವ ಆರೋಪ ಆಗಾಗ ಕೇಳಿಬರುತ್ತದೆ. ಮಹಿಳೆಯರ ಉಡುಪಿನ ಬಗ್ಗೆ ಪ್ರಸ್ತಾಪಿಸಿ ಅತ್ಯಾಚಾರದ ಕಾರಣಗಳನ್ನು ವಿಶ್ಲೇಷಿಸಿದ ಅನೇಕ ಉದಾಹರಣೆಗಳು ಕಣ್ಣ ಮುಂದಿವೆ. ರಾತ್ರಿ ವೇಳೆ ಹೆಣ್ಣು ಮಗಳು ಒಬ್ಬಳೆ ಅಲ್ಲಿಗೆ ಹೋಗಿದ್ದೇಕೆ? ತಡರಾತ್ರಿ ವರೆಗೆ ಹೊರಗೆ ಹೋಗಿದ್ದು ತಪ್ಪು ಎನ್ನುವಂಥ ಅನೇಕ ಕಾರಣಗಳನ್ನು ಕೊಟ್ಟು ಅತ್ಯಾಚಾರಕ್ಕೆ ಮಹಿಳೆಯೇ ಕಾರಣ ಎಂದು ಪರೋಕ್ಷವಾಗಿ ಸಮರ್ಥನೆ ಮಾಡಿಕೊಂಡ ಜನಪ್ರತಿನಿಧಿಗಳಿಗೆ ನಮ್ಮಲ್ಲಿ ಕೊರತೆ ಇಲ್ಲ. ಈ ಮನಸ್ಥಿತಿ ಬದಲಾಗಬೇಕು. ಇಂಥ ಹೇಳಿಕೆ, ಮನಸ್ಥಿತಿಯಿಂದಾಗಿ ಎಷ್ಟೊ ಹೆಣ್ಣು ಮಕ್ಕಳು ತಮ್ಮ ಮೇಲೆ ನಡೆದ ದೌರ್ಜನ್ಯ, ಅತ್ಯಾಚಾರವನ್ನು ಹೇಳಿಕೊಳ್ಳದೆ ಸಂಕಟ ಅನುಭವಿಸುತ್ತಿದ್ದಾರೆ. ಯಾರೊ ಒಂದಿಬ್ಬರು ಧೈರ್ಯ ಮಾಡಿ ಅತ್ಯಾಚಾರ ನಡೆದಿದೆ ಎಂದು ಹೇಳಿಕೊಂಡರೆ ಅವರನ್ನೆ ಆರೋಪಿಯನ್ನಾಗಿ ಮಾಡುವ ಹುನ್ನಾರ ನಡೆಯುತ್ತದೆ. ಅಂತಿಮವಾಗಿ ಧೈರ್ಯ ತೋರಿದ ಹೆಣ್ಣು ಮಕ್ಕಳಿಗೆ ನ್ಯಾಯವೂ ಸಿಗುವುದಿಲ್ಲ. ಹೆಣ್ಣಿಗೆ ನ್ಯಾಯ ಸಿಗಬೇಕಾದರೆ ಗಂಡಿನ ಮನಸ್ಥಿತಿ ಮೊದಲು ಬದಲಾಗಬೇಕು. ಇಲ್ಲವಾದಲ್ಲಿ ಈ ಕಾರ್ಯಕ್ರಮವು ಸಹ ಕೆಲವೇ ಕೆಲವು ಪ್ರಭಾವಿಗಳ ಕೈಗೆ ಸಿಲುಕಿ ವಿಫಲವಾಗುವುದರಲ್ಲಿ ಸಂದೇಹವೇ ಇಲ್ಲ.

# ಲೈಂಗಿಕ ಕಿರುಕುಳ ಪ್ರಕರಣ; ಮತ್ತೊಮ್ಮೆ ಮುರುಘಾ ಶ್ರೀಗಳ ಬಂಧನ!



■ ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ಲೈಂಗಿಕ ಕಿರುಕುಳ ಪ್ರಕರಣದಲ್ಲಿ ಒಂದು ವರ್ಷ ಹಿಂದೆ ಜೈಲು ಪಾಲಾಗಿ ನಾಲ್ಕು ದಿನಗಳ ಹಿಂದೆ ಜಾಮೀನು ಮೇಲೆ ಹೊರಬಂದಿದ್ದ ಚಿತ್ರದುರ್ಗದ ಮರುಘಾ ಮಠದ ಡಾ. ಶಿವಮೂರ್ತಿ ಮುರುಘಾ ಶರಣರನ್ನು ಮತ್ತೆ ಬಂಧಿಸಲಾಗಿದೆ.

ಚಿತ್ರದುರ್ಗದ 2ನೇ ಅಪರ ಜಿಲ್ಲಾ & ಸತ್ರ ನ್ಯಾಯಾಲಯದಿಂದ ಮುರುಘಾ ಶ್ರೀ ವಿರುದ್ಧ ಅರೆಸ್ಟ್ ವಾರಂಟ್ ಜಾರಿಯಾಗಿತ್ತು. ಹೀಗಾಗಿ ದಾವಣಗೆರೆಯ ವಿರುಕ್ತ ಮಠಕ್ಕೆ ಆಗಮಿಸಿದ ಪೊಲೀಸರು ಶ್ರೀಗಳನ್ನು ಬಂಧಿಸಿದ್ದು ಚಿತ್ರದುರ್ಗಕ್ಕೆ ಕರೆದೊಯ್ಯುತ್ತಿದ್ದಾರೆ.

ಚಿತ್ರದುರ್ಗದ ಎರಡನೇ ಹೆಚ್ಚುವರಿ ಸೆಷನ್ಸ್ ನ್ಯಾಯಾಧೀಶ ಬಿ ಕೆ ಕೋಮಲಾ ಅವರು ಜಾಮೀನು ರಹಿತ ವಾರೆಂಟ್ ಹೊರಡಿಸಿದ್ದು, ಮಂಗಳವಾರದೊಳಗೆ ಶಿವಮೂರ್ತಿ ಶರಣರನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸುವಂತೆ ಪೊಲೀಸರಿಗೆ ಆದೇಶಿಸಿದ್ದಾರೆ.

2022ರ ಸೆಪ್ಟೆಂಬರ್ 1 ರಿಂದ ಬಂಧನದಲ್ಲಿದ್ದ ಮುರುಘಾ ಶ್ರೀಗಳ ವಿರುದ್ಧ ಎರಡು ಕಔಅಖಔ ಪ್ರಕರಣಗಳು ದಾಖಲಾಗಿದೆ. ಇದರಲ್ಲಿ ಮೊದಲ ಪ್ರಕರಣದಲ್ಲಿ ನವೆಂಬರ್ 8ರಂದು ಹೈಕೋರ್ಟ್ ಜಾಮೀನು ನೀಡಿದ್ದರಿಂದ ನವೆಂಬರ್ 16ರಂದು ಶ್ರೀಗಳು ಜೈಲಿನಿಂದ ಬಿಡುಗಡೆಯಾಗಿದ್ದರು.

ಬಿಡುಗಡೆಯಾದ ನಂತರ ದಾವಣೆಗೆರೆಯ ವಿರಕ್ತ ಮಠದಲ್ಲಿ ತಂಗಿದ್ದ ಶ್ರೀಗಳನ್ನು ಚಿತ್ರದುರ್ಗ ಪೊಲೀಸರು ಇಂದು ಬಂಧಿಸಿದ್ದಾರೆ. ಮಠಾಧೀಶರ ವಿರುದ್ಧದ ಎರಡು ಪೋಕ್ಸೊ ಪ್ರಕರಣಗಳಲ್ಲಿ ಒಂದರಲ್ಲಿ ಜಾಮೀನಿಗೆ ಹೈಕೋರ್ಟ್ ಹಲವು ಷರತ್ತುಗಳನ್ನು ವಿಧಿಸಿದ್ದು, ಪ್ರಕರಣಗಳ ತನಿಖೆ ಪೂರ್ಣಗೊಳ್ಳುವವರೆಗೆ ಚಿತ್ರದುರ್ಗ ಜಿಲ್ಲೆಗೆ ಪ್ರವೇಶ ನಿರಾಕರಿಸಿದೆ.

ಎರಡು ಲಕ್ಷ ರೂಪಾಯಿಗಳ ವೈಯಕ್ತಿಕ ಬಾಂಡ್ ಮತ್ತು ಸಮಾನ ಮೊತ್ತಕ್ಕೆ ಇಬ್ಬರ ಶ್ಯೂರಿಟಿಯ ಮೇಲೆ ಅವರಿಗೆ ಜಾಮೀನು ನೀಡಲಾಯಿತು. ಸಾಕ್ಷಿಗಳನ್ನು ಹಾಳು ಮಾಡದಂತೆ ಅಥವಾ ಸಾಕ್ಷಿಗಳ ಮೇಲೆ ಪ್ರಭಾವ ಬೀರದಂತೆ ಎಚ್ಚರಿಕೆ ನೀಡಿದರು.

ಮಠಾಧೀಶರು ಮತ್ತು ಇತರ ನಾಲ್ವರ ವಿರುದ್ಧ ಮೈಸೂರಿನ 'ಒಡನಾಡಿ ಸೇವಾ ಸಂಸ್ಥೆ' ಎಂಬ ಎನ್‌ಜಿಒ, ಮಠದ ಶಾಲೆಯಲ್ಲಿ ಓದುತ್ತಿರುವ ಮತ್ತು ಚಿತ್ರದುರ್ಗದ ಹಾಸ್ಟೆಲ್‌ನಲ್ಲಿ ವಾಸಿಸುತ್ತಿರುವ ಅಪ್ರಾಪ್ತ ವಿದ್ಯಾರ್ಥಿಗಳಿಗೆ ಲೈಂಗಿಕ ಕಿರುಕುಳ ನೀಡುತ್ತಿದೆ ಎಂದು ಆರೋಪಿಸಿ ಮೊದಲ ದೂರು ದಾಖಲಿಸಿತ್ತು.

ಮೈಸೂರಿನ ನಜರಾಬಾದ್ ಪೊಲೀಸರು ಪೋಕ್ಸೊ ಮತ್ತು ಎಸ್‌ಸಿ/ಎಸ್‌ಟಿ (ದೌರ್ಜನ್ಯ ತಡೆ) ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದರು. ನಂತರ ಪ್ರಕರಣವನ್ನು ಚಿತ್ರದುರ್ಗ ಗ್ರಾಮಾಂತರ ಠಾಣೆಗೆ ವರ್ಗಾಯಿಸಲಾಗಿತ್ತು.

2019 ಮತ್ತು 2022ರ ಹಾಸ್ಟೆಲ್‌ನಲ್ಲಿ ವಾಸಿಸುತ್ತಿದ್ದಾಗ ಇಬ್ಬರು ಅಪ್ರಾಪ್ತ ಬಾಲಕಿಯರ ತಾಯಿ ತನ್ನ ಇಬ್ಬರು ಹೆಣ್ಣುಮಕ್ಕಳು ಮತ್ತು ಇತರ ಇಬ್ಬರು ಅಪ್ರಾಪ್ತ ಬಾಲಕಿಯರ ಮೇಲೆ ಶ್ರೀಗಳು ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಿ ದೂರು ನೀಡಿದ ನಂತರ ಪೋಕ್ಸೊ ಅಡಿಯಲ್ಲಿ ಎರಡನೇ ಪ್ರಕರಣ ದಾಖಲಾಗಿತ್ತು.

ಕಿರಿಯ ಪೀಠಾಧಿಪತಿ ಬಸವಾದಿತ್ಯ ಹಾಗೂ ಪರಮಶಿವಯ್ಯ, ಗಂಗಾಧರ್, ಮಹಾಲಿಂಗ, ಕರಿಬಸಪ್ಪ ಸೇರಿದಂತೆ ಇತರರು ಭಾಗಿಯಾಗಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿತ್ತು. ನಂತರ ಎರಡನೇ ಪ್ರಕರಣದಲ್ಲಿ ಪರಮಶಿವಯ್ಯ ಅವರ ಹೆಸರನ್ನು ಚಾರ್ಜ್‌ಶೀಟ್‌ನಿಂದ ಕೈಬಿಡಲಾಗಿತ್ತು.

# ಬಿಗ್ ಬಾಸ್‌ನಲ್ಲಿ ಅವಕಾಶ ಕೊಡಿ ಅಂತ ಎತ್ತಿನಗಾಡಿಯಲ್ಲಿ ಬಂದು ಕಿಚ್ಚನ ಮನೆ ಮುಂದೆ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಿಚ್ಚನ ಮನೆ ಮುಂದೆ ವ್ಯಕ್ತಿಯೊಬ್ಬನ ಅತಿರೇಕದ ವರ್ತನೆ ಕಂಡು ಸೆಕ್ಯೂರಿಟಿ ಗಾರ್ಡ್‌ಗಳು ಶಾಕ್ ಆಗಿದ್ದಾರೆ. ಬಿಗ್ ಬಾಸ್ ಮನೆಗೆ ಹೋಗೋಕೆ ಅವಕಾಶ ಮಾಡಿ ಕೊಡಿ ಅಂತ ರಾತ್ರೋ ರಾತ್ರಿ ಕಿಚ್ಚನ ಮನೆ ಮುಂದೆ ವ್ಯಕ್ತಿಯೊಬ್ಬ ಹೈ ಡ್ರಾಮ ಮಾಡಿದ್ದಾನೆ.

ಚಾನ್ಸ್ ಕೇಳೋಕೆ ಅಂತ ಎತ್ತಿನ ಗಾಡಿ ಮೂಲಕ ಬಂದಿರೋ ಮಂಜು ಅನ್ನೋ ವ್ಯಕ್ತಿ ನಿನ್ನೆ ಸಂಜೆ ಸುಮಾರು 6 ಗಂಟೆಯಿಂದ 10ಗಂಟೆವರೆಗೂ ಸುದೀಪ್ ಮನೆ ಮುಂದೆ ಕಾದು ನಿಂತಿದ್ದಾನೆ.

ಟಿ ನರಸಿಪುರದಿಂದ ಬಂದಿದಿನಿ ಅಂತ ಹೇಳಿದ್ದ ಮಂಜು, ನಾವು ಅನಕ್ಷರಸ್ತರು ರೈತರು ಬಿಗ್ ಬಾಸ್ ಹೋಗಲು ಅವಕಾಶ ಕೊಡಿ ಅಂತ ಎತ್ತಿನ ಗಾಡಿ ತಂದು ಸುದೀಪ್ ಮನೆ



ಮುಂದೆ ನಿಲ್ಲಿಸಿದ್ದ. ನಂತರ ಸುದೀಪ್ ಮನೇಲಿಲ್ಲ ಚೆನ್ನೈ ಹೋಗಿದ್ದಾರೆ ಅಂತ ಹೇಳಿ ಸೆಕ್ಯುರಿಟಿ ಮನವಿ ಮಾಡಿ ಕಳಿಸಿದ್ದಾರೆ.

ಮಂಜು ಹೇಳುವ ಪ್ರಕಾರ ಮನೆಯೊಳಗಿದ್ದ ವ್ಯಕ್ತಿಯೊಬ್ಬ ಮಂಜುಗೆ ಅವಾಚ್ಯಶಬ್ದಗಳಿಂದ ನಿಂದನೆ ಮಾಡಿದ್ರಂತೆ.

ಧಮಾಕಿ ಸಹ ಹಾಕಿದ್ದಾರೆ ಅಂತ ಆರೋಪಿಸಿದ್ದಾನೆ. ಎತ್ತಿನ ಗಾಡಿಗೆ ಬ್ಯಾನರ್ ಕಟ್ಕೊಂಡ್ ಬಂದು ಜೆಪಿ ನಗರದ ಸುದೀಪ್ ಮನೆ ಮುಂದೆ ಗಾಡಿ ನಿಲ್ಲಿಸಿದ್ದ ಮಂಜುಗೆ ಬುದ್ದಿ ಹೇಳಿ ಕಳಿಸಲಾಗಿದೆ ಅನ್ನೋ ಮಾಹಿತಿ ಸಿಕ್ಕಿದೆ

# ಒಬ್ಬರಿಂದ ಅತ್ಯಾಚಾರ ಮಾಡಲು ಸಾಧ್ಯವೇ ಇಲ್ಲ, ಎರಡೂ ಕೈಗಳು ತಟ್ಟಿದ್ರೆನೆ ಚಪ್ಪಾಳೆ: ಅಮರೇಗೌಡ ಬಯ್ಯಾಪುರ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಜಗತ್ತಿನಲ್ಲಿ ಒಬ್ಬರಿಂದ ಅತ್ಯಾಚಾರ ಮಾಡಲು ಸಾಧ್ಯವಿಲ್ಲಾ, ಎರಡೂ ಕೈ ತಟ್ಟಿದ್ರೆನೆ ಚಪ್ಪಾಳೆ ಆಗೋದು ಎಂದು ಕುಷ್ಟಗಿ ಮಾಜಿ ಶಾಸಕ ಅಮರೇಗೌಡ ಬಯ್ಯಾಪುರ ಅವರು ಅತ್ಯಾಚಾರ ನೆಡದಿದೆ ನ್ಯಾಯ ಕೊಡಿಸಿ ಎಂದು ಹೇಳಿದ ಸಂತ್ರಸ್ತೆಯ ಸಂಬಂಧಿಗೆ ಸಲಹೆ ನೀಡಿದ್ದಾರೆ ಎನ್ನಲಾದ ಆಡಿಯೋ ವೈರಲ್ ಆಗಿದೆ.



ಕುಷ್ಟಗಿ ತಾಲೂಕಿನ ಎಂ. ಗುಡದೂರು ಗ್ರಾಮದಲ್ಲಿ ಮಹಿಳೆಯ ಮೇಲೆ ಕಾಂಗ್ರೆಸ್ ಮುಖಂಡ ಅತ್ಯಾಚಾರ ಆರೋಪ ಕೇಳಿ ಬಂದಿದ್ದು ಕೇಸ್ ದಾಖಲಾದ್ರೂ ಕ್ರಮಕ್ಕೆ ಸಂಬಂಧ ಪಟ್ಟವರಿಂದ ಮೀನಾಮೇಷ ಮಾಡುತ್ತಿದ್ದಾರೆ ಎನ್ನಲಾಗಿದೆ. ಹೀಗಾಗಿ ಸಂತ್ರಸ್ಥ ಮಹಿಳೆಯ ಮಾವ ನ್ಯಾಯಕ್ಕೆ ಎಸ್ಪಿ, ಮಾಜಿ ಶಾಸಕರಿಗೆ ಮನವಿ ಮಾಡಿದ್ದಾರೆ. ಈ ವೇಳೆ ಮಾಜಿ ಶಾಸಕ ಈ ರೀತಿ ಹೇಳಿರುವ ಆಡಿಯೋ ವೈರಲ್ ಆಗಿದೆ.

# ಇನ್ನೂ ಎರಡು ದಿನದಲ್ಲಿ ಮದುವೆಯಾಗಬೇಕಿದ್ದ ಯುವತಿ ಅನುಮಾನಾಸ್ಪದವಾಗಿ ಸಾವು

■ ವಿಜಯಸಾಕ್ಷಿ ಸುದ್ದಿ,



ವಿಜಯನಗರ: 2 ದಿನದಲ್ಲಿ ಮದುವೆಯಾಗ ಬೇಕಿದ್ದ ಯುವತಿ ಅನುಮಾನಾಸ್ಪದ ವಾಗಿ ಸಾವನ್ನಪ್ಪಿರುವ ಘಟನೆ ವಿಜಯನಗರ ಜಿಲ್ಲೆಯ ಹೊಸಪೇಟೆ ತಾಲೂಕಿನ ಟಿಬಿ ಡ್ಯಾಂ ಬಳಿ ನಡೆದಿದೆ. ಐಶ್ವರ್ಯ ರೈ ಮೃತಪಟ್ಟ ಯುವತಿ. ಕೇವಲ 2 ದಿನಗಳಲ್ಲಿ ಯುವತಿ ಅಂತರ್ಜಾತಿ ಯುವಕನನ್ನು ವಿವಾಹವಾಗಲು ತಯಾರಾಗಿದ್ದಳು. ಆದರೆ ಯುವತಿ ಮದುವೆಯಾಗಬೇಕಿದ್ದ ವರನ ಮನೆಯಲ್ಲೇ ಅನುಮಾನಾ ಸ್ಪದವಾಗಿ ಸಾವನ್ನಪ್ಪಿದ್ದಾಳೆ. ಯುವತಿ ಕೆಳ ಜಾತಿಯವಳು ಎಂಬ ಕಾರಣಕ್ಕೆ ಕೆಲವು ಷರತ್ತುಗಳ ಮೇಲೆ ಯುವಕನ ಕಡೆಯವರು ಮದುವೆಗೆ ಒಪ್ಪಿದ್ದರು. ಇದೇ ಕಾರಣಕ್ಕೆ ಯುವತಿಯ ಕೊಲೆಗೆ ಪ್ರಚೋದನೆ ನೀಡಲಾಗಿದೆ ಎಂದು ಐಶ್ವರ್ಯ ಪೋಷಕರು ಆರೋಪಿಸಿದ್ದಾರೆ. ಐಶ್ವರ್ಯ ಹಾಗೂ ವರ ಅಶೋಕ್ ಕಳೆದ 7–8 ವರ್ಷಗಳಿಂದ ಪ್ರೀತಿಸುತ್ತಿದ್ದರು. ನಮಗೂ ಅವರಿಗೂ ಹೊಂದಾಣಿಕೆ ಆಗಲ್ಲ, ನಾನು ಈ ಮದುವೆ ಬೇಡ ಎಂದು ಮಗಳಿಗೆ ಹೇಳಿದ್ದೆ.

ನನ್ನ ಮಗಳು ಬಹಳ ಗಟ್ಟಿ ಮನಸ್ಸಿನವಳು. ಆಕೆ ಆತ್ಮಹತ್ಯೆ ಮಾಡಿಕೊಳ್ಳುವಷ್ಟು ಹೇಡಿಯಲ್ಲ. ಯುವಕನ ಮನೆಯವರೇ ಕೊಲೆ ಮಾಡಿದ್ದಾರೆ ಎಂದು ಯುವತಿಯ ಪೋಷಕರು ಆರೋಪಿಸಿದ್ದಾರೆ.

## ವಿದ್ಯುತ್ ತಂತಿ ತುಳಿದು ತಾಯಿ–ಮಗು ಸಾವು ಕೇಸ್: ಇಬ್ಬರು ಬೆಸ್ಕಾಂ ಅಧಿಕಾರಿಗಳು ಸಸ್ಪೆಂಡ್

■ ವಿಜಯಸಾಕ್ಷಿ ಸುದ್ದಿ,

ಬೆಂಗಳೂರು : ವಿದ್ಯುತ್ ತಂತಿ ತುಳಿದು ತಾಯಿ–ಮಗು ಸಾವು ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಅಧಿಕಾರಿಗಳನ್ನು ಅಮಾನತು ಮಾಡಲಾಗಿದೆ. ಪ್ರಕರಣದಲ್ಲಿ ನಿರ್ಲಕ್ಷ್ಯದ ಆರೋಪದಲ್ಲಿ ಇಬ್ಬರು ಬೆಸ್ಕಾಂ ಅಧಿಕಾರಿಗಳನ್ನು ಇಂಧನ ಇಲಾಖೆ ಅಮಾನತು ಮಾಡಿದ್ದು, ಮೃತರಿಗೆ ರಾಜ್ಯ ಸರ್ಕಾರದಿಂದ ತಲಾ 5 ಲಕ್ಷ ಪರಿಹಾರ ಘೋಷಿಸಲಾಗಿದೆ.

ಈ ಬಗ್ಗೆ ಇಂಧನ ಸಚಿವ ಕೆ.ಜೆ. ಜಾರ್ಜ್ ಪ್ರತಿಕ್ರಿಯಿಸಿ, ಬೆಂಗಳೂರಿನ ವೈಟ್‌ಫೀಲ್ಡ್‌ನಲ್ಲಿರುವ ಹೋಪ್ ಫಾರ್ಮ್ ಬಳಿ ವಿದ್ಯುತ್ ಶಾಕ್‌ಗೆ ಒಬ್ಬ ಮಹಿಳೆ ಮತ್ತು ಒಂದು ಮಗು ಸಾವನ್ನಪ್ಪಿರುವ ದುರ್ದೈವದ ಘಟನೆ ನಡೆದಿದೆ. ಈ ದುರದೃಷ್ಟಕರ ಸಾವುಗಳಿಗೆ ಕಾರಣವಾದ ಘಟನೆಯ ಕುರಿತು ನಾವು ವಿಚಾರಣೆಯನ್ನು ಕೈಗೆತ್ತಿಕೊಂಡಿದ್ದೇವೆ. ಇದರ ವರದಿಯನ್ನು ಎದುರು ನೋಡುತ್ತಿದ್ದೇವೆ. ಈ ಅಪಘಾತಕ್ಕೆ ಕಾರಣರಾದ AE ಮತ್ತು AEE ಯನ್ನು ಅಮಾನತುಗೊಳಿಸಲಾಗಿದೆ ಮತ್ತು ಇದಕ್ಕೆ ಕಾರಣಾದವರು ಮತ್ತಾರೇ ಇದ್ದರೂ ನಿರ್ದಾಕ್ಷಿಣ್ಯ ಕ್ರಮ ಜರುಗಿಸಲಾಗುವುದು. ಈ ದುರ್ಘಟನೆಯಲ್ಲಿ ಸಂಬಂಧಿಕರನ್ನು ಕಳೆದುಕೊಂಡ ಕುಟುಂಬ ಸದಸ್ಯರಿಗೆ ರಾಜ್ಯ ಸರ್ಕಾರ ತಲಾ 5 ಲಕ್ಷ ರೂ ಪರಿಹಾರ ನೀಡಲಿದೆ ಎಂದು ತಿಳಿಸಿದ್ದಾರೆ.

## ಶ್ರೀ ಮಳಲಿ ಸಂಸ್ಥಾನಮಠದಲ್ಲಿ ಕಾರ್ತಿಕ ದೀಪೋತ್ಸವ ಸಮಾರಂಭ ನ.26ಕ್ಕೆ

# ಶ್ರೀ ಗುರು ಪಟ್ಟಾಧಿಕಾರ ರಜತ ಮಹೋತ್ಸವ

■ ವಿಜಯಸಾಕ್ಷಿ ಸುದ್ದಿ, ರಿಪ್ಪನ್‌ಪೇಟೆ

ತೀರ್ಥಹಳ್ಳಿ ತಾಲೂಕ ಶ್ರೀಮದ್ರಂಭಾಪುರಿ ಖಾಸಾ ಶಾಖಾ ಮಹಾಸಂಸ್ಥಾನ ಮಳಲಿ ಮಠದಲ್ಲಿ ನ.26ರಂದು ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಡಾ.ಗುರುನಾಗಭೂಷಣ ಶಿವಾಚಾರ್ಯ ಸ್ವಾಮಿಗಳವರ ಶ್ರೀ ಗುರುಪಟ್ಟಾಧಿಕಾರ ರಜತ ಮಹೋತ್ಸವ ಹಾಗೂ ಕಾರ್ತಿಕ ದೀಪೋತ್ಸವ ಧರ್ಮ ಸಮಾರಂಭ ಜರುಗಲಿದೆ.

ಅ.ಭಾ.ವೀರಶೈವ ಶಿವಾಚಾರ್ಯ ಸಂಸ್ಥೆ ಗೌರವಾಧ್ಯಕ್ಷರಾದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಲಿದ್ದು, ಅಧ್ಯಕ್ಷರಾದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಸಮ್ಮುಖ ವಹಿಸುವರು. ಬಂಕಾಪುರ ಅರಳೆಲೆ ಹಿರೇಮಠದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಸದಾಶಯ ನುಡಿಯುವರು.

ಮಳಲಿಯ ಡಾ.ಗುರು ನಾಗಭೂಷಣ ಶಿವಾಚಾರ್ಯರ



ಅಧ್ಯಕ್ಷತೆಯಲ್ಲಿ ನಡೆಯುವ ಸಮಾರಂಭವನ್ನು ಸಂಸದ ಬಿ.ವೈ. ರಾಘವೇಂದ್ರ ಉದ್ಘಾಟಿಸುವರು. ಶಾಸಕ ಆರಗ ಜ್ಞಾನೇಂದ್ರ 'ಸುದ್ದಿ ಸಂಪದ' ಬಿಡುಗಡೆಗೊಳಿಸುವರು. ಶಾಸಕರಾದ ಎಂ.ಪಿ. ಲತಾ ಮಲ್ಲಿಕಾರ್ಜುನ ದಿನದರ್ಶಿಕೆ ಬಿಡುಗಡೆ ಮಾಡುವರು. ಮುಖ್ಯ ಅತಿಥಿಗಳಾಗಿ ಶಾಸಕ ಬೇಳೂರು ಗೋಪಾಲಕೃಷ್ಣ, ಮಾಜಿ ಸಚಿವ ಕಿಮ್ಮನೆ ರತ್ನಾಕರ, ಹರತಾಳು ಹಾಲಪ್ಪ, ಡಾ. ಆರ್.ಎಂ. ಮಂಜುನಾಥಗೌಡ, ಬಿ.ಎ. ಇಂದೂಧರಗೌಡ್ರು, ಎಸ್. ಎಸ್. ಜ್ಯೋತಿಪ್ರಕಾಶ, ಎನ್.ಜೆ. ರಾಜಶೇಖರ, ಕೆ.ಆರ್. ಪ್ರಕಾಶ, ಡಾ. ಡಿ.ವಿ. ರೇವಣೆಪ್ಪಗೌಡರು, ಬಿ.ಯುವರಾಜ್, ವೀರೇಶ ಆಲುವಳ್ಳಿ, ದೇವೇಂದ್ರಗೌಡ್ರು ನವಟೂರು, ವಿರೂಪಾಕ್ಷ ಸಾಗರ, ಸಚಿನಗೌಡ ಔಕ ಭಾಗವಹಿಸುವರು. ರಿಪ್ಪನ್‌ಪೇಟೆಯ ಆರ್.ಎಸ್. ಪ್ರಶಾಂತ ಪ್ರಾಸ್ತಾವಿಕ ಮಾತನಾಡುವರು. ಸುಳ್ಳದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮಿಗಳು ಹಾಗೂ ಕವಲೇದುರ್ಗದ ಮರುಳಸಿದ್ಧ ಶಿವಾಚಾರ್ಯ ಸ್ವಾಮಿಗಳು ಉಪದೇಶಾಮೃತ ನೀಡುವರು.

ಶಾಂತಪುರದ ಶಿವಾನಂದ ಶಿವಾಚಾರ್ಯರು, ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರು, ಕೋಣಂದೂರಿನ ಶ್ರೀಪತಿಪಂಡಿತಾರಾಧ್ಯ ಶಿವಾಚಾರ್ಯರು, ಸಂಗೊಳ್ಳಿ ಗುರುಲಿಂಗ ಶಿವಾಚಾರ್ಯರು, ಬಿಳಕಿ ರಾಚೋಟೇಶ್ವರ ಶಿವಾಚಾರ್ಯರು, ದುಗ್ಲಿ–ಕಡೇನಂದಿಹಳ್ಳಿ ರೇವಣಸಿದ್ಧೇಶ್ವರ ಶಿವಾಚಾರ್ಯರು, ಹಣಮಾಪುರದ ಡಾ.ಸೋಮಶೇಖರ ಶಿವಾಚಾರ್ಯರು, ಹಾರನಹಳ್ಳಿಯ ಶಿವಯೋಗಿ ಶಿವಾಚಾರ್ಯರು, ಸಿಂಧಗಿಯ ಶಿವಯೋಗಿ ವೀರರಾಜೇಂದ್ರ ಶಿವಾಚಾರ್ಯರು ಸಮಾರಂಭದಲ್ಲಿ ಪಾಲ್ಗೊಳ್ಳುವರು.

ವಿವಿಧ ಕ್ಷೇತ್ರಗಳ ಸಾಧಕರಿಗೆ ಹಲವಾರು ಗಣ್ಯರಿಗೆ, ಸೇವಾಕರ್ತರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸುವರು.

ಪ್ರಾತಃಕಾಲದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ, ಶ್ರೀ ವೀರಭದ್ರೇಶ್ವರ ಸ್ವಾಮಿಗೆ, ಆದಿಗುರು ನಾಗಾರ್ಜುನ ಶಿವಾಚಾರ್ಯರಾದಿಯಾಗಿ ಎಲ್ಲಾ ಲಿಂಗೈಕ್ಯ ಶಿವಾಚಾರ್ಯರ ಕರ್ತೃ ಗದ್ದುಗೆಗಳಿಗೆ ಮಹಾರುದ್ರಾಭಿಷೇಕ ಹಾಗೂ ಮಹಾಮಾತೆ ಶ್ರೀ ಚೌಡೇಶ್ವರಿ ದೇವಿಗೆ ಸಹಸ್ರ ಕುಂಕುಮಾರ್ಚನೆ, ಹೋಮ ಹವನಾದಿಗಳು ನಡೆಯಲಿವೆ. ಶ್ರೀ ಗುರು ಪಟ್ಟಾಧಿಕಾರದ ರಜತ ಮಹೋತ್ಸವದ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ.

ಬೆಳಿಗ್ಗೆ 8.30ಕ್ಕೆ ಲೋಕಕಲ್ಯಾಣಾರ್ಥವಾಗಿ, ಪ್ರದೇಶಾಭಿವೃದ್ಧಿಗಾಗಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳವರ ಇಷ್ಟಲಿಂಗ ಮಹಾಪೂಜೆ ನಡೆಯುವುದು ಎಂದು ಪ್ರಕಟಣೆ ತಿಳಿಸಿದೆ.

# ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿದ ಬಿಜೆಪಿ ಮಾಜಿ ಸಚಿವ ಶ್ರೀರಾಮುಲು!



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದ ಮಾಜಿ ಸಚಿವ ಬಿ. ಶ್ರೀರಾಮುಲು ಅವರು ಇಂದು ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರನ್ನು ಭೇಟಿಯಾಗಿದ್ದು ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಪಕ್ಷಕ್ಕೆ ಸೇರುತ್ತಾರೆ ಎಂಬ ಊಹಾಪೋಹಗಳಿಗೆ ಕಾರಣವಾಗಿದೆ.

ಇತ್ತೀಚೆಗಷ್ಟೇ ಬಿಜೆಪಿ ಹೈಕಮಾಂಡ್ ಕರ್ನಾಟಕದ ರಾಜ್ಯಾಧ್ಯಕ್ಷರನ್ನಾಗಿ ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ಅವರ ಪುತ್ರ ವಿಜಯೇಂದ್ರ ಅವರನ್ನು ನೇಮಿಸಿದ ಹಿನ್ನೆಲೆಯಲ್ಲಿ ಈ ಸಭೆ ನಡೆದಿದೆ. ಈ ಕ್ರಮವು ಆ ಸ್ಥಾನದ ಮೇಲೆ ಕಣ್ಣಿಟ್ಟಿದ್ದ ಶ್ರೀರಾಮುಲು ಅವರು ಅಸಮಾಧಾನ ಗೊಳ್ಳುವಂತೆ ಮಾಡಿದೆ ಎಂದು ವರದಿಯಾಗಿದೆ.

ಮೂಲಗಳ ಪ್ರಕಾರ, ಶ್ರೀರಾಮುಲು ಅವರು ತಮ್ಮ ಮಗಳ ಮದುವೆಗೆ ಶಿವಕುಮಾರ್ ಅವರನ್ನು ಆಹ್ವಾನಿಸಲು ಅವರ ನಿವಾಸಕ್ಕೆ ಭೇಟಿ ನೀಡಿದ್ದರು ಎಂದು ತಿಳಿದುಬಂದಿದೆ.

ಶ್ರೀರಾಮುಲು ಅವರು ರಾಜ್ಯದ ಹಿಂದಿನ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರದಲ್ಲಿ 2021ರ ಆಗಸ್ಟ್ 4 ರಿಂದ 2023ರ ಮೇ 13ರವರೆಗೆ ಸಾರಿಗೆ ಇಲಾಖೆ ಮತ್ತು ಬುಡಕಟ್ಟು ಕಲ್ಯಾಣ ಸಚಿವರಾಗಿ ಸೇವೆ ಸಲ್ಲಿಸಿದ್ದರು. ಅವರು 2020ರ ಅಕ್ಟೋಬರ್ 12 ರಿಂದ 2021ರ ಜುಲೈ 26ರವರೆಗೆ ರಾಜ್ಯದ ಸಮಾಜ ಕಲ್ಯಾಣ ಇಲಾಖೆಯ ಸಚಿವರಾಗಿಯೂ ಸೇವೆ ಸಲ್ಲಿಸಿದ್ದಾರೆ.

ರಾಜ್ಯ ವಿಧಾನಸಭೆ ಚುನಾವಣೆಗೂ ಮುನ್ನ ಶ್ರೀರಾಮುಲು ಅವರು ಕಾಂಗ್ರೆಸ್ ನಾಯಕ ಸಿದ್ದರಾಮಯ್ಯ ಅವರು ಮತ್ತೊಮ್ಮೆ ರಾಜ್ಯದ ಮುಖ್ಯಮಂತ್ರಿಯಾಗುವುದನ್ನು ನೋಡಲು ಬಯಸುವುದಾಗಿ ಕಾರ್ಯಕ್ರಮವೊಂದರಲ್ಲಿ ಹೇಳಿದ್ದರು.

# ಬಾಕಿ ವೇತನ ಪಾವತಿಗೆ ಕೆಎಸ್‌ಆರ್‌ಟಿಸಿ ಸಿಬ್ಬಂದಿ ಆಗ್ರಹ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರನ್ನು ಭೇಟಿ ಮಾಡಿದ ಕೆಎಸ್ ಆರ್ ಟಿಸಿ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಬಾಕಿ ಉಳಿದಿರುವ ವೇತನವನ್ನು ಪಾವತಿಸುವಂತೆ ಒತ್ತಾಯಿಸಿದೆ. ತಮ್ಮ ಬೇಡಿಕೆಗಳ ಬಗ್ಗೆ ಸರ್ಕಾರದ ಗಮನ ಸೆಳೆಯಲು ಡಿಸೆಂಬರ್ 6 ರಂದು ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನದಲ್ಲಿ ಪ್ರತಿಭಟನೆ ನಡೆಸಲು ಈ ಸಮಿತಿ ನಿರ್ಧರಿಸಿದೆ.

ಈ ಕುರಿತು ಮಾತನಾಡಿದ ಕೆಎಸ್‌ಆರ್‌ಟಿಸಿ ಸ್ಟಾಫ್ ಅಂಡ್ ವರ್ಕರ್ಸ್ ಫೆಡರೇಶನ್ ಅಧ್ಯಕ್ಷ ಅನಂತ ಸುಬ್ಬ ರಾವ್, ಹಿಂದಿನ ಬಿಜೆಪಿ ಸರ್ಕಾರ 2020 ರ ಜನವರಿಯಿಂದ ಜಾರಿಗೆ ಬರುವಂತೆ ಶೇಕಡಾ 15 ರಷ್ಟು ವೇತನ ಹೆಚ್ಚಳಕ್ಕೆ ಆದೇಶ ನೀಡಿತ್ತು. ಆದರೆ, 38 ತಿಂಗಳವರೆಗೆ ಹೆಚ್ಚಿಸಲಾಗಿರುವ ಬಾಕಿಯನ್ನು ಇನ್ನೂ ಪಾವತಿ ಮಾಡಿಲ್ಲ. ಈ ಮಧ್ಯೆ ಈ ಅವಧಿಯಲ್ಲಿ ಅನೇಕ ಉದ್ಯೋಗಿಗಳು ನಿವೃತ್ತರಾಗಿದ್ದಾರೆ, ಕೆಲವರು ನಿವೃತ್ತಿ ತೆಗೆದುಕೊಂಡಿ–ದ್ದರೆ, ಕೆಲವರು ನಿಧನರಾಗಿದ್ದಾರೆ. ಈ ನೌಕರರ ವೇತನ ಪರಿಷ್ಕರಣೆ ಕುರಿತು ಯಾವುದೇ ಸ್ಪಷ್ಟತೆ ಇಲ್ಲ ಎಂದರು.

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಶಕ್ತಿ ಯೋಜನೆಯ ಯಶಸ್ಸಿಗೆ, ಫೆಡರೇಶನ್‌ನಿಂದ ಸಂಪೂರ್ಣ ಬೆಂಬಲ ನೀಡಿದ್ದೇವೆ. ಆದಾಗ್ಯೂ, ಎಲ್ಲಾ ನಾಲ್ಕು ಬಸ್ ನಿಗಮಗಳಆರ್ಥಿಕ ಸ್ಥಿತಿಯು ಹಲವು ಕಾರಣಗಳಿಂದ ಹದಗೆಟ್ಟಿದೆ. ಅವರ ಬಾಕಿ ಇರುವ ವೇತನವನ್ನು ವಾಪತಿಸುವುದಲ್ಲದೇ ಶಕ್ತಿ ಯೋಜನೆಯಡಿ ಶೂನ್ಯ ಟಿಕೆಟ್ ವೆಚ್ಚವನ್ನು ತಕ್ಷಣವೇ ಬಸ್ ನಿಗಮಗಳಿಗೆ ವಿತರಿಸಬೇಕು ಮತ್ತು ನೌಕರರು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸಲು ಬಸ್ ನಿಗಮಗಳು ನೌಕರರ ಸಂಘಗಳೊಂದಿಗೆ ಸಭೆಗಳನ್ನು ನಡೆಸಬೇಕು ಎಂದು ಒಕ್ಕೂಟ ಒತ್ತಾಯಿಸಿದೆ.

ಈ ಸಂಬಂಧ ನವೆಂಬರ್ 17 ರಂದು ಸಚಿವರಿಗೆ ಮನವಿ ಪತ್ರ ಸಲ್ಲಿಸಲಾಗಿದೆ.

## ಪರಿಹಾರ ಕೇಳುವ ನೆಪದಲ್ಲಿ ಬಂದು ಮಹಿಳೆಯ ಕತ್ತು ಸೀಳಿ ಚಿನ್ನದ ಸರ ದರೋಡೆ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಗರದ ಹೊರವಲಯದ ಆನೇಕಲ್‌ನಲ್ಲಿ ಸೋಮವಾರ ವಯೋವೃದ್ಧ ಮಹಿಳೆಯೊಬ್ಬರ ಕತ್ತು ಸೀಳಿ ಚಿನ್ನದ ಸರ ದೋಚಿರುವ ಘಟನೆ ನಡೆದಿದೆ. ಆನೇಕಲ್‌ನ ಲಕ್ಷ್ಮಿ ಥಿಯೇಟರ್ ರಸ್ತೆಯಲ್ಲಿ ವಾಸವಾಗಿರುವ ಅಕ್ಕಯ್ಯಮ್ಮ ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರ ಸ್ಥಿತಿ ಚಿಂತಾಜನಕವಾಗಿದೆ. ಮಹಿಳೆ ಮತ್ತು ಆಕೆಯ ಪತಿ ನಾರಾಯಣಾಚಾರಿ ಸ್ಥಳೀಯ ತಂತ್ರಿಗಳಾಗಿದ್ದು, ಕಾಲು ಮತ್ತು ಕೈ ಮುರಿತ, ಸ್ನಾಯು ಸೆಳೆತಗಳಿಗೆ ಮಂತ್ರ ಪಠಣದ ಮೂಲಕ ಪರಿಹಾರ ಒದಗಿಸುತ್ತಾರೆ. ಇಂದು ಬೆಳಗ್ಗೆ ಆರೋಪಿಗಳು ಪರಿಹಾರ ಕೇಳುವ ನೆಪದಲ್ಲಿ ಮನೆಗೆ ನುಗ್ಗಿ ಆಕೆಯ ಮೇಲೆ ಹಲ್ಲೆ ನಡೆಸಿ ಪರಾರಿಯಾಗಿದ್ದರು ಎಂದು ಪೊಲೀಸರು ವಿವರಿಸಿದ್ದಾರೆ.

## ನೀವೂ ನಮ್ಮ ಜೊತೆ ಕೈಜೋಡಿಸಿ

'ವಿಜಯಸಾಕ್ಷಿ'

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.

ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..

ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.

E-mail: vijayasakshidaily@gmail.com

ಮೊ : 9019256545

# 60 ಸ್ಮಾರಕಗಳ ಸಂರಕ್ಷಣೆಗೆ ಶೀಘ್ರ ಅಧಿಸೂಚನೆ

▸▸ ಮೊದಲನೇ ಪುಟದಿಂದ

ಅವುಗಳನ್ನು ಮುಂದಿನ ಜನಾಂಗಕ್ಕೆ ತೆಗೆದುಕೊಂಡು ಹೋಗುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

**ಸ್ಮಾರಕಗಳ ಸಂರಕ್ಷಣೆಗೆ ದತ್ತು ಯೋಜನೆ** : ಕರ್ನಾಟಕದ ಕಲೆ, ಪರಂಪರೆಯನ್ನು ಸಂರಕ್ಷಿಸುವ ನಿಟ್ಟಿನಲ್ಲಿ ನಮ್ಮ ಸ್ಮಾರಕ ದರ್ಶನ ಮತ್ತು ಸಂರಕ್ಷಣೆಗಾಗಿ ಪ್ರವಾಸ ಕಾರ್ಯಕ್ರಮದ ಮೂಲಕ ಬೀದರ ಜಿಲ್ಲೆಯಿಂದ ರಾಜ್ಯದ ಪ್ರವಾಸವನ್ನು ಪ್ರಾರಂಭಿಸಲಾಗಿದೆ. ರಾಜ್ಯಾದ್ಯಂತ 280 ಸಂರಕ್ಷಿತ ಸ್ಮಾರಕಗ0ನ್ನು ದತ್ತು ಯೋಜನೆಗೆ ಒಳಪಡಿಸಲಾಗಿದ್ದು, ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಸ್ಮಾರಕಗಳನ್ನು ದತ್ತು ಯೋಜನೆಗೆ ನೀಡಲಾಗುತ್ತಿದೆ. ಐಹೊಳೆಯಲ್ಲಿರುವ ಕೆಲವೊಂದು ಸ್ಮಾರಕಗಳ ಸಂರಕ್ಷಣೆಗೆ ದತ್ತು ಪಡೆಯಲು ಆಸಕ್ತರು ಮುಂದೆ ಬಂದಿರುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ, ಶಾಸಕರಾದ ಎಚ್.ವಾಯ್.ಮೇಟಿ, ಜೆ.ಟಿ.ಪಾಟೀಲ, ವಿಜಯಾನಂದ ಕಾಶಪ್ಪನವರ, ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಪ್ರವಾಸೋದ್ಯಮ ಇಲಾಖೆಯ ನಿರ್ದೇಶಕ ಪ್ರಶಾಂತ ಮನೋಹರ, ಭಾರತೀಯ ಪುರಾತತ್ವ ಇಲಾಖೆಯ ದೇವರಾಜ, ಪ್ರಮೋದ, ಪ್ರಶಾಂತ ಕುಲಕರ್ಣಿ, ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ ಸೇರಿದಂತೆ ಮಾಜಿ ಸಚಿವ ಎಸ್.ಜಿ.ನಂಜಯ್ಯನಮಠ, ಮಾಜಿ ಜಿ.ಪಂ ಅಧ್ಯಕ್ಷೆ ಬಾಯಕ್ಕ ಮೇಟಿ ಇದ್ದರು.

### ಸಿದ್ಧಲಿಂಗ ನಗರದ ಪ್ರೌಢಶಾಲೆಯಲ್ಲಿ ಗಣಿತ ಮಾದರಿಗಳನ್ನು ವೀಕ್ಷಿಸಿದ ನಗರಸಭೆ ಆಯುಕ್ತ ಗಂಗಪ್ಪ

# ಗಣಿತ ಪ್ರಯೋಗಾಲಯ ವಿದ್ಯಾರ್ಥಿಗಳ ಆಸ್ತಿ



■ ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್‌ನ ಸಂಸ್ಥಾಪಕ ಸದಸ್ಯರಾದ ಹೇಮಲತಾ ಬಸವರಾಜ ಹೊರಟ್ಟಿಯವರ ಸಹಕಾರದಿಂದ ಸಿದ್ಧಲಿಂಗ ನಗರದಲ್ಲಿನ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸರಕಾರಿ ಪ್ರೌಢಶಾಲೆಯಲ್ಲಿ ನಿರ್ಮಾಣಗೊಂಡಿರುವ ಗಣಿತ ಪ್ರಯೋಗಾಲಯ ಮತ್ತು ಸಂಶೋಧನಾ ಕೇಂದ್ರ ಅಮೂಲ್ಯ ಮಾದರಿಗಳನ್ನು ಹೊಂದಿದೆ. ಇವುಗಳ ಮೂಲಕ ಗಣಿತದ ಸರಳ ಕಲಿಕೆಗೆ ಹಾಗೂ ಸಂಶೋಧನೆಗೆ ವಿದ್ಯಾರ್ಥಿಗಳಿಗೆ ಸಹಕಾರಿಯಾಗುತ್ತದೆ. ಇದರ ಉಪಯೋಗವನ್ನು ವಿದ್ಯಾರ್ಥಿಗಳು ಪಡೆಯುವಂತಾಗಲಿ ಎಂದು ಆಹಾರ ಮತ್ತು ನಾಗರಿಕ ಇಲಾಖೆಯ ಉಪನಿರ್ದೇಶಕರು ಹಾಗೂ ನಗರಸಭೆಯ ಆಯುಕ್ತ ಗಂಗಪ್ಪ ಅಭಿಪ್ರಾಯಪಟ್ಟರು.

ಇತ್ತೀಚೆಗೆ ಅವರು ಪಟ್ಟಣದ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಗಣಿತ ಪ್ರಯೋಗಾಲಯ ಮತ್ತು ಸಂಶೋಧನಾ ಕೇಂದ್ರಕ್ಕೆ ಭೇಟಿ ನೀಡಿ ವಿವಿಧ ಗಣಿತ ಮಾದರಿಗಳನ್ನು ವೀಕ್ಷಿಸಿ ಮಾತನಾಡಿದರು.

ವಿದ್ಯಾರ್ಥಿಗಳಿಗೆ ಗಣಿತ ಕಲಿಕೆಯೆಂದರೆ ಕಠಿಣವೆನಿಸಿದೆ. ಇಲ್ಲಿನ ಗಣಿತದ ಮಾದರಿಗಳನ್ನು ಕಂಡಾಗ ಗಣಿತ ಕಲಿಕೆ ಸುಲಭವಾಗಬಹುದೆಂಬ ಆಶಯ ವ್ಯಕ್ತವಾಗುತ್ತದೆ. ವಿದ್ಯಾರ್ಥಿಗಳು ಈ ಪ್ರಯೋಗಾಲಯದಲ್ಲಿ ಸ್ವತಃ ತಾವೇ ಮಾಡಿ ನೋಡುವ, ವಿಷಯಗಳನ್ನು ಅರ್ಥ ಮಾಡಿಕೊಳ್ಳಲು ಅನುಕೂಲವಾಗುವ, ಮಾಡಿ ಕಲಿ-ನೋಡಿ ತಿಳಿ ಎಂಬ ಆಶಯವನ್ನು ಸಾರ್ಥಕಪಡಿಸಿಕೊಳ್ಳಲು ಸಹಾಯಕವಾಗಿವೆ. ಶಿಕ್ಷಕರು ಈ ಪ್ರಯೋಗಾಲಯದ ಮಹತ್ವದ ಸಂಗತಿಗಳನ್ನು ವಿದ್ಯಾರ್ಥಿಗಳಿಗೆ ಮನದಟ್ಟು ಮಾಡಿ, ಅವರು ಗಣಿತವನ್ನು ಕಲಿಯಲಷ್ಟೇ ಅಲ್ಲ, ತಮ್ಮ ಮನದೊಳಕ್ಕೆ ಅದನ್ನು ಆಹ್ವಾನಿಸಿಕೊಂಡು ಅಧ್ಯಯನ ಮಾಡುವ ರೀತಿಯಲ್ಲಿ ಮಕ್ಕಳಿಗೆ ಉತ್ತೇಜನ ಮತ್ತು ಪ್ರೋತ್ಸಾಹ ನೀಡಲು ಈ ಪ್ರಯೋಗಾಲಯ ಸಹಕಾರಿ ಎಂದರು.

ಈ ಸಂದರ್ಭದಲ್ಲಿ ನಗರಸಭೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ(ಪರಿಸರ) ಆನಂದ ಬದಿ, ನಗರಸಭಾ ಸದಸ್ಯೆ ವಿದ್ಯಾವತಿ ಗಡಗಿ, ಎಸ್. ಎಂ. ಅಗಡಿ, ಮುಖ್ಯೋಪಾಧ್ಯಾಯೆ ಪಾರ್ವತಿ ವಸ್ತ್ರದ, ವಿಜಯಲಕ್ಷ್ಮಿ ಅಣ್ಣಿಗೇರಿ, ಎಸ್.ಆರ್. ಹನುಮಗೌಡರ, ಎಸ್.ಜಿ. ಕಲಗುಡಿ, ಎಮ್.ಐ. ಶಿವನಗೌಡ್ರ, ಎಂ.ಪಿ. ಸಾಂಬ್ರಾಣಿ, ಎಸ್.ಬಿ. ಗುಳೇದವರ, ಎಸ್.ಎಂ. ಪತ್ತಾರ, ಎಸ್.ಎಸ್. ಗಾಳಿ, ಆರ್.ವೈ. ಬಸರಿ, ಎಸ್.ಎ. ಬಾಣದ, ಎಸ್.ಎ. ಗದ್ದನಕೇರಿ, ಎನ್.ಆರ್. ಶಿರೋಳ, ಎಸ್.ಯು. ಕುಷ್ಟಗಿ, ಜಿ.ಎನ್. ಅಳವಂಡಿ, ಪಿ.ವಿ. ದಾಸರ, ಎಲ್.ಎಸ್. ಮಾಳೋತ್ತರ ಮುಂತಾವದರು ಉಪಸ್ಥಿತರಿದ್ದರು.

ಕೆಲ ಚಟುವಟಿಕೆಗಳನ್ನು ಸ್ವತಃ ತಾವೇ ಮಾಡಿ ನೋಡುವ ಮೂಲಕ ಗಂಗಪ್ಪನವರು ಖುಷಿಪಟ್ಟರು. ಈ ಚಟುವಟಿಕೆಗಳನ್ನು ಗಮನಿಸಿದಾಗ ಗಣಿತ ಕಲಿಕೆ ಇಷ್ಟೊಂದು ಸುಲಭ ಎಂದು ನನಗೆ ಅನ್ನಿಸಿರಲೇ ಇಲ್ಲ. ಇಂತಹ ಚಟುವಟಿಕೆಗಳು ನಿಜಕ್ಕೂ ವಿದ್ಯಾರ್ಥಿಗಳ ಮನದಲ್ಲಿ ಗಣಿತ ಕಲಿಕೆಯ ಪ್ರೀತಿಯನ್ನು ಹುಟ್ಟಿಸುವಲ್ಲಿ ಸಹಾಯಕವಾಗುತ್ತವೆ ಎಂದು ಸಂತಸ ವ್ಯಕ್ತಪಡಿಸಿದರು.

# ಬ್ಯಾಂಕುಗಳು ದೇಶದ ಆರ್ಥಿಕ ಅಭಿವೃದ್ಧಿಗೆ ಹೆಬ್ಬಾಗಿಲು



■ ವಿಜಯಸಾಕ್ಷಿ ಸುದ್ದಿ, ಗದಗ

ದೇಶದ ಆರ್ಥಿಕ ಅಭಿವೃದ್ಧಿಗೆ ಬ್ಯಾಂಕುಗಳು ಪಾತ್ರ ಬಹಳ ದೊಡ್ಡದಾಗಿದ್ದು, ದೇಶದ ಆರ್ಥಿಕ ಪ್ರಗತಿಗೆ ಬ್ಯಾಂಕುಗಳು ಹೆಬ್ಬಾಗಿಲು ಎಂದು ಹರ್ಲಾಪೂರ ಕೆನರಾ ಬ್ಯಾಂಕ್ ವ್ಯವಸ್ಥಾಪಕ ಗವಿಸಿದ್ದಪ್ಪ ಅಳವಂಡಿ ಹೇಳಿದರು.

ಸಮಿಪದ ಹರ್ಲಾಪೂರ ಕೆನರಾ ಬ್ಯಾಂಕ್ ಶಾಖೆಯಲ್ಲಿ ಕೆನರಾ ಬ್ಯಾಂಕಿನ 118ನೇ ಸಂಸ್ಥಾಪಕರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ, ಕೆನರಾ ಬ್ಯಾಂಕಿನ ನಮ್ಮ ಹೆಮ್ಮೆಯ ಸಂಸ್ಥಾಪಕರಾದ ಅಮ್ಮೆಂಬಳ್ ಸುಬ್ಬರಾವ್ ಪೈ ಅವರು ಸ್ಥಾಪನೆ ಮಾಡಿದ ಕೆನರಾ ಬ್ಯಾಂಕ್ ದೇಶದಲ್ಲಿ ಹೆಮ್ಮರವಾಗಿ ಬೆಳೆದು ನಿಂತಿದೆ ಎಂದರು.

ಗದಗ ಜಿಲ್ಲಾ ಬ್ಯಾಂಕ್ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಹನುಮೇಶ ಗಂಗರಾವುತರ ಮಾತನಾಡಿ, ಕೆನರಾ ಬ್ಯಾಂಕ್ ಜಾಗತಿಕ ವ್ಯಾಪಾರದಲ್ಲಿ ಒಟ್ಟು 21.56 ಲಕ್ಷ ಕೋಟಿ ಹೂಡಿಕೆ ಮಾಡಿದೆ ಹಾಗೂ 11 ಕೋಟಿಗೂ ಹೆಚ್ಚು ಗ್ರಾಹಕರನ್ನು ಹೊಂದಿದೆ. ಎಲ್ಲಾ ಜನಸಾಮಾನ್ಯರಿಗೆ ಆರ್ಥಿಕವಾಗಿ ಪ್ರಗತಿ ಹೊಂದಲು ಸಾಲವನ್ನು ನೀಡಿ ಸಹಕಾರಿಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ಕೆನರಾ ಬ್ಯಾಂಕಿನ ಅಸಿಸ್ಟೆಂಟ್ ಮ್ಯಾನೇಜರ್ ಪ್ರಿಯಾ ಸಜ್ಜನರ, ಪರಪ್ಪ ಹರಿಜನ, ಶರಣಪ್ಪ ಜೋಗಿನ ಹಾಗೂ ಗ್ರಾಹಕರು ಪಾಲ್ಗೊಂಡಿದ್ದರು.

# ಜಿಲ್ಲಾ ಮಹಿಳಾ ಕಾಂಗ್ರೆಸ್‌ನಿಂದ ಇಂದಿರಾ ಗಾಂಧಿಯವರ ಜಯಂತ್ಯುತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಮಹಿಳಾ ಕಾಂಗ್ರೆಸ್ ವತಿಯಿಂದ ಉಕ್ಕಿನ ಮಹಿಳೆ, ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರ 106ನೇ ಜಯಂತ್ಯುತ್ಸವವನ್ನು ಕಾಟನ್ ಸೇಲ್ ಸೊಸೈಟಿಯಲ್ಲಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಹಿಳಾ ಕಾಂಗ್ರೆಸ್‌ನ ಅಧ್ಯಕ್ಷೆ ನೀಲಮ್ಮ ಬೋಳನವರ, ಇಂದಿರಾ ಗಾಂಧಿಯವರು ಬಡವರಿಗೆ ಕೊಟ್ಟ 20 ಅಂಶಗಳ ಕಾರ್ಯಕ್ರಮ ಮತ್ತು ಜೀವನ ಚರಿತ್ರೆಯ ಕುರಿತು ಮಾತನಾಡಿದರು. ಬ್ಲಾಕ್ ಅಧ್ಯಕ್ಷೆ ಶಕುಂತಲಾ ಅಕ್ಕಿ ಇಂದಿರಾ ಗಾಂಧಿಯವರ ಕುರಿತು ಮಾತನಾಡಿದರು.




ಈ ಸಂದರ್ಭದಲ್ಲಿ ಜಿ.ಪಂ ಉಪಾಧ್ಯಕ್ಷೆ ಪುಷ್ಪ ಕೊರವನವರ, ನಗರಸಭೆ ಮಾಜಿ ಅಧ್ಯಕ್ಷೆ ಶಿವಲೀಲಾ ಅಕ್ಕಿ, ರಾಜ್ಯ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮುಸ್ಕಾನ್ ಸೈಯದ್, ನಗರಸಭೆ ಸದಸ್ಯರಾದ ಪರ್ವೀನ್‌ಬಾನು ಮುಲ್ಲಾ, ಲಕ್ಷ್ಮೀ ಭಜಂತ್ರಿ, ಮಹಿಳಾ ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷೆ ಲಲಿತಾ ಗೊಳಗೊಳಕಿ, ವಹಿದ ಖಲೀಫ್, ಸಾವಿತ್ರಿ ಹೂಗಾರ, ದ್ರಾಕ್ಷಾಯಿಣಿ ಹಾಸಲಕರ, ಲಕ್ಷ್ಮೀ, ಪುಷ್ಪಾ ಕೊರನ್ನವರ್, ವಿಜಯಲಕ್ಷ್ಮೀ ಆಸೂಟಿ, ಲಲಿತಾ ಗೊಳಗೊಳಕಿ, ಸಾವಿತ್ರಿ ಹೂಗಾರ್, ಲಕ್ಷ್ಮೀ ದ್ಯಾಪನಗೌಡರ, ವಿಜಯಲಕ್ಷ್ಮೀ ಹಳ್ಯಾಳ, ರಾಜೇಶ್ವರಿ ಮೆಗುರ್, ವಹೀದಾ ಕಲೀಫ್, ಸುಧಾ ಬುದಂಪೂರ್, ಮಸ್ಕಾನ್ ಸಯ್ಯದ್, ಪರವೀನ್‌ಬಾನು ಮುಲ್ಲಾ, ರೇಣುಕಾ ಕುರಿ, ಗೀತಾ ಗುಡೆನ್ನಕಟ್ಟಿ, ಲಕ್ಷ್ಮವ್ವ ಭಜಂತ್ರಿ ಮುಂತಾದವರು ಉಪಸ್ಥಿತರಿದ್ದರು.

# ಸೌಲಭ್ಯಗಳನ್ನು ತಲುಪಿಸುವಲ್ಲಿ ವಿಳಂಬವಾಗಬಾರದು

▸▸ ಮೊದಲನೇ ಪುಟದಿಂದ

ಸ್ವಂತ ಕಟ್ಟಡ ಇಲ್ಲದ ಅಂಗನವಾಡಿ ಕೇಂದ್ರಗಳಿಗೆ ಸ್ಥಳೀಯ ಸಂಸ್ಥೆಗಳ ಆಡಳಿತ ಸಂಸ್ಥೆಗಳೊಂದಿಗೆ ಸಮನ್ವಯ ಸಾಧಿಸಿ, ನಿವೇಶನ ಆಯ್ಕೆಗೆ ಕ್ರಮ ವಹಿಸಬೇಕು. ಬಾಲ್ಯ ವಿವಾಹ ಪ್ರಕರಣಗಳು ಕಂಡುಬಂದಲ್ಲಿ ಪ್ರಕರಣ ದಾಖಲಿಸಲು ವಿಳಂಬ ಮಾಡಬಾರದು. ಬಾಕಿ ಉಳಿದಿರುವ ದೌರ್ಜನ್ಯ ಪ್ರಕರಣಗಳ ಇತ್ಯರ್ಥಕ್ಕೆ ಶೀಘ್ರ ಕ್ರಮ ವಹಿಸಬೇಕೆಂದು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪಿ.ವೈ. ಶೆಟ್ಟೆಪ್ಪನವರ ಮಾತನಾಡಿ, ಮಹಿಳೆ ಮತ್ತು ಮಕ್ಕಳ ದೌರ್ಜನ್ಯ ತಡೆ ಕಾಯ್ದೆಯಡಿ ತಾಲೂಕಾ ಮಟ್ಟದಲ್ಲಿ ಹಾಗೂ ಗ್ರಾಮ ಮಟ್ಟದಲ್ಲಿ ಸಮಿತಿಗಳನ್ನು ರಚಿಸಲಾಗಿದ್ದು ತಾಲೂಕಾ ಮಟ್ಟದಲ್ಲಿ 5 ಸಭೆಗಳನ್ನು ಹಾಗೂ ಗ್ರಾ.ಪಂ ಮಟ್ಟದಲ್ಲಿ 104 ಸಭೆಗಳನ್ನು ಆಯೋಜಿಸಲಾಗಿದೆ ಎಂದು ಮಾಹಿತಿ ಒದಗಿಸಿದರು.

ಸಭೆಯಲ್ಲಿ ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆ, ಸ್ವಾಧಾರ ಯೋಜನೆ, ದಮನಿತ ಮಹಿಳೆಯರಿಗೆ ವಿವಿಧ ತರಬೇತಿ, ಗೃಹಲಕ್ಷ್ಮೀ ಯೋಜನೆ ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಕುರಿತು ಚರ್ಚಿಸಲಾಯಿತು. ಸಭೆಯಲ್ಲಿ ಜಿಲ್ಲಾ ಕಾನೂನು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಗುರುಪ್ರಸಾದ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಆರ್‌ಸಿಎಚ್ ಅಧಿಕಾರಿ ಡಾ. ಬಿ.ಎಂ. ಗೊಜನೂರ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಕ್ಕಳ ರಕ್ಷಣಾಧಿಕಾರಿ ರಾಧಾ ಮಣ್ಣೂರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ ಯೋಜನೆಯಡಿ ಜುಲೈನಿಂದ ಸೆಪ್ಟೆಂಬರ್ 23ರವರೆಗೆ ಒಟ್ಟು 91 ಪ್ರಕರಣಗಳು ದಾಖಲಾಗಿದ್ದು, ಆ ಪೈಕಿ 27 ಪ್ರಕರಣಗಳು ಇತ್ಯರ್ಥಗೊಂಡಿವೆ. 26 ಪ್ರಕರಣಗಳು ನ್ಯಾಯಾಲಯದ ವಿಚಾರಣಾ ಹಂತದಲ್ಲಿವೆ. ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯಡಿ ಗ್ರಾ.ಪಂ.ವಾರು ಲಿಂಗಾನುಪಾತ ಮಾಹಿತಿಯನ್ನು ಪಡೆಯಲಾಗುತ್ತಿದ್ದು, ಕಡಿಮೆ ಲಿಂಗಾನುಪಾತ ಇರುವ ಗ್ರಾ.ಪಂ.ಗಳಲ್ಲಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಜಿಲ್ಲೆಯಲ್ಲಿ 5 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಎಂದು ಪಿ.ವೈ. ಶೆಟ್ಟೆಪ್ಪನವರ ಸಭೆಗೆ ಮಾಹಿತಿ ನೀಡಿದರು.

# ವಿಶೇಷ ಚೇತನ ಮಕ್ಕಳಿಗೆ ಫುಡ್ ಕಿಟ್ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ವಿಶೇಷ ಚೇತನ ಮಕ್ಕಳ ಬಗೆಗೆ ಕೀಳರಿಮೆ ಬೇಡ. ತಂದೆ-ತಾಯಿಗಳು ಇಂತಹ ಮಕ್ಕಳನ್ನು ಆತ್ಮಸ್ಥೈರ್ಯದಿಂದ ಪೋಷಿಸಬೇಕು. ಸಮುದಾಯವೂ ಜವಾಬ್ದಾರಿಯಿಂದ ಈ ಮಕ್ಕಳನ್ನು ಮುಖ್ಯವಾಹಿನಿಗೆ ತರುವಲ್ಲಿ ಪ್ರಮುಖ ಪಾತ್ರ ವಹಿಸಬೇಕೆಂದು ಕೆ.ಎಸ್. ಬೇಲೇರಿ ಹೇಳಿದರು.

ಅವರು ಶನಿವಾರ ಗದಗ ಹೆಲ್ಪಿಂಗ್ ಹ್ಯಾಂಡ್ಸ್ ಫೌಂಡೇಶನ್ ಹಾಗೂ ಗದುಗಿನ ಅಪ್ಪುರಾಜ್ ಇವೆಂಟ್ಸ್ ಸಂಘಟನೆಯಿಂದ ಮಕ್ಕಳ ದಿನಾಚರಣೆಯ ಅಂಗವಾಗಿ ವಿಶೇಷ ಚೇತನ ಮಕ್ಕಳಿಗೆ ನೀಡಿದ ಫುಡ್ ಕಿಟ್‌ಗಳನ್ನು ವಿತರಿಸಿ ಮಾತನಾಡಿದರು.

ಸಾಮಾನ್ಯ ಮಕ್ಕಳನ್ನು ಬೆಳೆಸುವದು ಸುಲಭ. ಆದರೆ ವಿಶೇಷ ಚೇತನ ಮಕ್ಕಳ ಪಾಲನೆ, ಪೋಷಣೆ ಕಷ್ಟಕರ. ಪಾಲಕರು ಧೈರ್ಯದಿಂದ ಈ ಮಕ್ಕಳ ಬೆಳವಣಿಗೆಯಲ್ಲಿ ವಿಶೇಷ ಕಾಳಜಿ ವಹಿಸಬೇಕೆಂದರು.

ಅತಿಥಿಯಾಗಿ ಆಗಮಿಸಿದ್ದ ಸಂಪನ್ಮೂಲ ವ್ಯಕ್ತಿ ಪ್ರಕಾಶ ಮಂಗಳೂರ ಮಾತನಾಡಿ, ಹುಟ್ಟಿನಿಂದಲೇ ವಿಕಲತೆ ಹೊಂದಿದ ಮಕ್ಕಳನ್ನು ಪ್ರೀತಿಯಿಂದ ಸಾಕಿ ಸಲುಹಿದ ತಂದೆ-ತಾಯಿಗಳೇ ನಿಜವಾದ ದೇವರು ಎಂದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿ ಶಶಿಧರ ಚಳಗೇರಿ, ಮಲ್ಲೇಶಪ್ಪ ಹೊಂಬಳ, ಎಸ್.ಎಸ್. ಹಿರೇಮಠ, ಎಸ್.ಬಿ. ಬಾಗೂರ, ಜಿ.ಕೆ. ಕಾಳಿ, ಗಿರಿಜವ್ವ ಪಲ್ಲೇದ, ಲಕ್ಷ್ಮೀ ಹಿರೇಮಠ, ಶಾಂತಾ ತೆಲಗಾವಿ, ವಿಜಯಲಕ್ಷ್ಮೀ ದೇಸಾಯಿಗೌಡ್ರ, ಮಂಜುಳಾ ಅನಂತಪೂರ, ನೀಲಮ್ಮ ಅಮಾತೆಗೌಡ್ರ, ರತ್ನಾ ಹೊಂಬಳ, ರತ್ನಾ ಅಂಗಡಿ, ಗೀತಾ ದೇಸಾಯಿ ಮುಂತಾದವರಿದ್ದರು.

### ರಾಜು ಸಾಂಗ್ಲೀಕರ ಜನ್ಮದಿನಾಚರಣೆ ನಿಮಿತ್ತ ವಿದ್ಯಾರ್ಥಿಗಳಿಗೆ ನೋಟ್‌ಬುಕ್, ಪೆನ್ ವಿತರಣೆ

# 'ಹಂಚಿ ಉಣ್ಣಬೇಕು' ಎಂಬುದು ನಮ್ಮ ನೆಲದ ಸಂಸ್ಕೃತಿ



■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಸಾಮಾಜಿಕ ಕಾರ್ಯಗಳ ಮೂಲಕ ವಿದ್ಯಾರ್ಥಿಗಳ ಹಾಗೂ ಬಡಜನರ ಬದುಕಿಗೆ ನೆರವಾಗುವ ಮೂಲಕ ಬದುಕು ಕಟ್ಟಿಕೊಳ್ಳುವವರ ಸಂಖ್ಯೆ ಹೆಚ್ಚಾಗಬೇಕಿದೆ ಎಂದು ಮುಖಂಡ ಬಸವರಾಜ ಕೊಟಗಿ ಹೇಳಿದರು.

ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.4ರಲ್ಲಿ ಸೋಮವಾರ ಸ್ಥಳೀಯ ಪುರಸಭೆ ಸದಸ್ಯ ರಾಜು ಸಾಂಗ್ಲೀಕರ ಅವರ 44ನೇ ಜನ್ಮದಿನಾಚರಣೆ ಪ್ರಯುಕ್ತ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ಹಾಗೂ ಪೆನ್ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಆಧುನಿಕ ಜಗತ್ತಿನಲ್ಲಿ ಎಲ್ಲವೂ ನನಗಿರಲಿ, ಎಲ್ಲವೂ ನನ್ನದು ಎನ್ನುವ ಜೀವನಶೈಲಿಗೆ ಬಾಗಶಃ ಜನರು ಒಗ್ಗಿಕೊಳ್ಳುತ್ತಿದ್ದಾರೆ. ಆದರೆ ನಮ್ಮ ನೆಲದ ಸಂಸ್ಕೃತಿಯಾದ 'ಹಂಚಿ ಉಣ್ಣಬೇಕು' ಎನ್ನುವ ಆಶಯವನ್ನು ಜೀವನದಲ್ಲಿ ಅಳವಡಸಿಕೊಂಡವರ ಸಂಖ್ಯೆ ವಿರಳವಿದೆ. ಈ ದಿಸೆಯಲ್ಲಿ ಸಮಾಜಮುಖಿ ಸೇವಾ ಕಾರ್ಯಗಳ ಮೂಲಕ ಬದುಕು ಕಟ್ಟಿಕೊಳ್ಳುತ್ತಿರುವವರಿಗೆ ಸಮಾಜದಲ್ಲಿ ವಿಶೇಷ ಗೌರವವಿದೆ.

ಕಳೆದ ಹಲವಾರು ವರ್ಷಗಳಿಂದ ಪಟ್ಟಣ ಸೇರಿ ಸುತ್ತಲಿನ ಗ್ರಾಮಗಳಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸಲು ನೋಟ್‌ಬುಕ್, ಪೆನ್ ವಿತರಣೆ ಸೇರಿ ಅನೇಕ ಸಾಮಾಜಿಕ ಕಾರ್ಯಗಳನ್ನು ಕೈಗೊಂಡಿರುವ ಸಾಂಗ್ಲೀಕರ ಅವರ ಸಮಾಜ ಸೇವೆ ಅನುಕರಣೀಯ ಎಂದರು.

ಶಾಲೆಯ ಪ್ರಭಾರಿ ಪ್ರಧಾನ ಗುರು ಆರ್.ಎಸ್. ಇಟಗಿ ಮಾತನಾಡಿದರು. ಶ್ರೀಧರ ಗಂಜಿಗೌಡರ, ಪಾಷಾ ಹವಾಲ್ದಾರ, ಪಾಷಾ ಗಂಗಾವತಿ, ಜಾಕೀರ ಯಲಬುರ್ಗಿ, ಇರ್ಫಾ ಮುಲ್ಲಾ, ಸಂತೋಷ ತೆಗ್ಗಿನಮನಿ, ಅಮೀರ ಮಾಲ್ದಾರ, ಸಹ ಶಿಕ್ಷಕಿಯರಾದ ಎಸ್.ಡಿ. ನಾಯಕ, ಸಾವಿತ್ರಿ ಪಾಟೀಲ, ಬಿ.ಬಿ. ಕಂದಪೂರ, ಸುಧಾ ಜಾಡರ ಸೇರಿದಂತೆ ಇತರರು ಭಾಗವಹಿಸಿದ್ದರು.

ಪುರಸಭೆ ಸದಸ್ಯ ಶಿವರಾಜ ಘೋರ್ಪಡೆ, ಜೆಡಿಎಸ್ ಜಿಲ್ಲಾಧ್ಯಕ್ಷ ಎಂ.ವಾಯ್. ಮುಧೋಳ ಮಾತನಾಡಿ, ಸಮಾಜದಲ್ಲಿ ಬಡವರು, ಶ್ರೀಮಂತರು ಸೇರಿದಂತೆ ಅನೇಕ ಅಸಹಾಯಕ ವರ್ಗದ ಜನರಿರುತ್ತಾರೆ. ಮಾನವೀಯ ಮೌಲ್ಯವುಳ್ಳವರು ತಮ್ಮ ಜನುಮದಿನವನ್ನು ಸಮಾಜಮುಖಿಯಾಗಿ ಆಚರಿಸಿಕೊಳ್ಳುವುದು ಅಪರೂಪ. ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಬದುಕು ಕಟ್ಟಿಕೊಳ್ಳುತ್ತಿರುವ ಸಾಂಗ್ಲೀಕರರಿಂದ ಮತ್ತಷ್ಟು ಸಾಮಾಜಿಕ ಕಾರ್ಯಗಳು ನಡೆಯಲಿ ಎಂದರು.

# ಕಾರ್ಯ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಜರುಗಿಸಿ

▸▸ ಮೊದಲನೇ ಪುಟದಿಂದ

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ. ಗುರುಪ್ರಸಾದ ಮಾತನಾಡಿ, ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ನವದೆಹಲಿ ಇವರ ಮಾರ್ಗಸೂಚಿಯನ್ವಯ ಬಾಲಕಾರ್ಮಿಕರನ್ನು ಹಾಗೂ ಕಿಶೋರಕಾರ್ಮಿಕರನ್ನು ರಕ್ಷಿಸಿ, ಪುನರ್ವಸತಿಗೊಳಿಸಿ ಶಿಕ್ಷಣ ಮುಂದುವರಿಕೆಗೆ ಅವಕಾಶ ಮಾಡಿಕೊಡುವ ಉದ್ದೇಶದಿಂದ ನವೆಂಬರ್ 20ರಿಂದ ಡಿಸೆಂಬರ್ 10ರವರೆಗೆ ನೋಡಲ್ ಅಧಿಕಾರಿಗಳನ್ನೊಳಗೊಂಡಂತೆ ರಕ್ಷಣಾ ಕಾರ್ಯಾಚರಣೆ ನಡೆಸಲು ತಿಳಿಸಲಾಗಿದೆ. ಇಲಾಖಾ ಅಧಿಕಾರಿಗಳು ಸಮರ್ಪಕವಾಗಿ ರಕ್ಷಣಾ ಕಾರ್ಯಾಚರಣೆ ನಡೆಸುವಂತೆ ಸೂಚಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಾಧಾ ಮಣ್ಣೂರ ಮಾತನಾಡಿ, ಗ್ರಾಮ ಹಾಗೂ ತಾಲೂಕು ಮಟ್ಟದಲ್ಲಿ ಮಕ್ಕಳ ರಕ್ಷಣಾ ಸಮಿತಿ ಸಭೆಗಳನ್ನು ನಡೆಸಲಾಗುತ್ತಿದ್ದು ಪ್ರತಿ ಸಭೆಯಲ್ಲಿ ಬಾಲಕಾರ್ಮಿಕ, ಭಿಕ್ಷಾಟನೆ, ಪೋಕ್ಸೋ, ಬಾಲ್ಯ ವಿವಾಹ ಇನ್ನಿತರ ಮಕ್ಕಳ ಸಮಸ್ಯೆಗಳ ಕುರಿತು ಹಾಗೂ ಐ.ಸಿ.ಪಿ.ಎಸ್. ಯೋಜನೆಗಳ ಕುರಿತು ವ್ಯಾಪಕ ಪ್ರಚಾರ ಮಾಡಲಾಗುತ್ತಿದೆ ಎಂದರಲ್ಲದೆ, ದತ್ತು ಕಾರ್ಯಕ್ರಮದ ಕುರಿತು ವಿವರಣೆ ನೀಡಿ, ಉಪಕಾರ ಯೋಜನೆಯಡಿ 2023-24ನೇ ಸಾಲಿನಲ್ಲಿ 13 ಮಕ್ಕಳಿಗೆ 5 ಸಾವಿರ ರೂಗಳಂತೆ 3 ತಿಂಗಳಿಗೆ ಡಿಬಿಟಿ ಮೂಲಕ 1,95,000 ರೂಗಳನ್ನು ಡಿಬಿಟಿ ಮೂಲಕ ಮಕ್ಕಳ ಖಾತೆಗೆ ಹಣ ಜಮಾ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಸಭೆಯಲ್ಲಿ 1098 ಮಕ್ಕಳ ಸಹಾಯವಾಣಿ ಪುನರ್ ಸ್ಥಾಪನೆ, ಮಕ್ಕಳ ವಿಶೇಷ ಗ್ರಾಮ ಸಭೆ, ದತ್ತು ಮಾಸಾಚರಣೆ ಕಾರ್ಯಕ್ರಮದ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪಿ.ವೈ. ಶೆಟ್ಟೆಪ್ಪನವರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆರ್‌ಸಿಎಚ್ ಅಧಿಕಾರಿ ಡಾ. ಬಿ.ಎಂ.ಗೊಜನೂರ, ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# 'ಗುರುಕುಲ ಕೀರ್ತಿ ಕಳಸ' ಪ್ರಶಸ್ತಿ ಪ್ರದಾನ





■ ವಿಜಯಸಾಕ್ಷಿ ಸುದ್ದಿ, ಗದಗ

ಗುರುಕುಲ ಕಲಾ ಪ್ರತಿಷ್ಠಾನದ ಕೇಂದ್ರ ಸಮಿತಿ ತುಮಕೂರು ಹಾಗೂ ವಿಜಯನಗರ ಜಿಲ್ಲಾ ಘಟಕದ ಸಹಯೋಗದಲ್ಲಿ ಸುವರ್ಣ ಕರ್ನಾಟಕ ಸಂಭ್ರಮದ ಸವಿನೆನಪಿನಲ್ಲಿ ವಿಜಯನಗರ ಜಿಲ್ಲೆಯ ಹೇಮಕೂಟ ಶೂನ್ಯ ಸಿಂಹಾಸನ ಶ್ರೀ ಜಗದ್ಗುರು ಕೊಟ್ಟೂರು ಸ್ವಾಮಿ ಸಂಸ್ಥಾನ ಮಠ ಹಂಪಿಯಲ್ಲಿ ಜರುಗಿದ ಅಖಿಲ ಭಾರತ 3ನೇ ಗುರುಕುಲ ಕಲಾ ಸಮ್ಮೇಳನದ ಸಮಾರಂಭದಲ್ಲಿ ಗದಗ ಜಿಲ್ಲೆಯ ಜನಪದ ಕಲಾವಿದ ಗವಿಶಿದ್ಧಯ್ಯ ಹಳ್ಳಿಕೇರಿಮಠ ಅವರಿಗೆ 'ಗುರುಕುಲ ಕೀರ್ತಿ ಕಳಸ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಈ ಸಂದರ್ಭದಲ್ಲಿ ಶ್ರೀ ಕೃಷ್ಣ ದೇವರಾಯ ವಿಶ್ವ ವಿದ್ಯಾಲಯದ ಪ್ರಸಾರಾಂಗ ನಿರ್ದೇಶಕ ಡಾ. ಬಿ.ಜಿ. ಕನಕೇಶಮೂರ್ತಿ, ಹೊಸಪೇಟೆಯ ಎ.ಎನ್. ಸಿದ್ಧಾರ್ಥ್ ಸಿಂಗ್, ಗುರುಕುಲ ಕಲಾ ಪ್ರತಿಷ್ಠಾನದ ಸಂಸ್ಥಾಪಕ ಕಾರ್ಯಾಧ್ಯಕ್ಷ ಡಾ.ಶಿವರಾಜ ಗೌಡ, ಸಂಸ್ಥಾಪಕ ಅಧ್ಯಕ್ಷ ಹುಲಿಯೂರದುರ್ಗ ಲಕ್ಷ್ಮೀನಾರಾಯಣ, ಗುಡ್ಡೇಗೌಡರ ಕರ್ನಾಟಕ ರೈತರ ಹಿತರಕ್ಷಣಾ ವೇದಿಕೆ ಬೆಂಗಳೂರು, ಪೊಲೀಸ್ ಇಲಾಖೆಯ ರವಿ ಕುಂಬಾರ, ಶಿಕ್ಷಣ ತಜ್ಞರಾದ ಸುಮನ್ ರಾವ್, ಗುರುಕುಲ ಕಲಾ ಪ್ರತಿಷ್ಠಾನದ ವಿಜಯನಗರ ಜಿಲ್ಲಾಧ್ಯಕ್ಷ ವೆಂಕಟೇಶ ಬಡಿಗೇರ, ಹಿರಿಯ ಚಿತ್ರನಟ ಡಾ. ಎನ್.ಬಿ. ಜಯಪ್ರಕಾಶ್ ರಾವ್ ಸೇರಿದಂತೆ ಕವಿಗಳು, ಕಲಾವಿದರು ಪಾಲ್ಗೊಂಡಿದ್ದರು.

## ನಿಧನ ವಾರ್ತೆ

### ಬಸವರಾಜ ಇಂಡಿ



ಗದಗ, ಬಾಗಲಕೋಟ ನಗರದ ನಿವಾಸಿ ಬಸವರಾಜ ಕರಬಸಪ್ಪ ಇಂಡಿ (81) ಭಾನುವಾರ ಬೆಳಿಗ್ಗೆ ಗದಗ ನಗರದಲ್ಲಿ ನಿಧನರಾದರು.

ಮೃತರು ಪತ್ನಿ, ಐವರು ಪುತ್ರಿಯರು, ಪುತ್ರ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

## ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ 'ಬಾಹ್ಯಾಕಾಶದತ್ತ ಭಾರತ' ಪ್ರಬಂಧ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ವಿಜ್ಞಾನ ಹಾಗೂ ವಾಣಿಜ್ಯ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ನ.26ರ ಬೆಳಿಗ್ಗೆ 10ಕ್ಕೆ 2023–24ನೇ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ 'ಬಾಹ್ಯ ಕಾಶದತ್ತ ಭಾರತ' ಎಂಬ ವಿಷಯದ ಕುರಿತು ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ.

ಪ್ರೌಢಶಾಲಾ ಮಕ್ಕಳಲ್ಲಿ ವಿಜ್ಞಾನದ ಬಗ್ಗೆ ಚಿಂತನೆ, ಸಂಶೋಧನಾ ಮನೋಭಾವ, ಬರವಣಿಗೆಯ ಸಾಮರ್ಥ್ಯ ರೂಪಿಸಿಕೊಳ್ಳಲು ಸಹಕಾರಿಯಾಗುವಂತೆ ಪ್ರೌಢಶಾಲೆಯ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಈ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶವಿದೆ. ಕನ್ನಡ ಹಾಗೂ ಆಂಗ್ಲ ಭಾಷೆಯಲ್ಲಿ ಪ್ರಬಂಧ ಬರೆಯಬಹುದಾಗಿದೆ. ವಿಮರ್ಶಾತ್ಮಕ ಮತ್ತು ಸೃಜನಶೀಲ ಬರಹಗಾರರಿಗೆ ಪ್ರಥಮ, ದ್ವಿತೀಯ, ತೃತೀಯ ಸ್ಥಾನಕ್ಕೆ ಪ್ರಶಸ್ತಿಪತ್ರ ಮತ್ತು ನಗದು ಬಹುಮಾನ ನೀಡಿ ಗೌರವಿಸಲಾಗುವುದು. ಭಾಗವಹಿಸಿದ ಎಲ್ಲ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರವನ್ನು ನೀಡಲಾಗುವದು ಎಂದು ಪ್ರಾಚಾರ್ಯ ಡಾ. ಎನ್.ಹಯವದನ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸ್ಪರ್ಧೆಯಲ್ಲಿ ಭಾಗವಹಿಸಲು ನ.22 ಸಂಜೆ 5 ಗಂಟೆಯೊಳಗಾಗಿ ಹೆಸರು ನೋಂದಾಯಿಸಬೇಕು. ಮಾಹಿತಿಗಾಗಿ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ. ಅಗಡಿ ವಿಜ್ಞಾನ ಹಾಗೂ ವಾಣಿಜ್ಯ ಪ.ಪೂ ಮಹಾವಿದ್ಯಾಲಯ, ಲಕ್ಷ್ಮೇಶ್ವರ–9448543754 ಇಲ್ಲಿಗೆ ಸಂಪರ್ಕಿಸಬಹುದು ಎಂದು ತಿಳಿಸಲಾಗಿದೆ.

### ತಹಸೀಲ್ದಾರರ ಅಧ್ಯಕ್ಷತೆಯಲ್ಲಿ ಭಕ್ತ ಕನಕದಾಸ ಜಯಂತಿ ಪೂರ್ವಭಾವಿ ಸಭೆ

## ಕನಕದಾಸರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸೋಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಕ್ತ ಕನಕದಾಸರ ಜಯಂತಿಯನ್ನು ನ.30ರಂದು ತಹಸೀಲ್ದಾರ ಕಚೇರಿಯಲ್ಲಿ, ಸಾರ್ವಜನಿಕರ ಸಹಭಾಗಿತ್ವದಲ್ಲಿ ಸರಕಾರದ ವತಿಯಿಂದ ಆಚರಿಸಲಾಗುವುದು. ಅಂದು ಸರ್ಕಾರದ ಎಲ್ಲ ಇಲಾಖೆಗಳಲ್ಲಿ ತಪ್ಪದೇ ಆಚರಣೆ ಮಾಡುವ ಮೂಲಕ ಮಹಾತ್ಮರರನ್ನು ಸ್ಮರಿಸುವ ಕಾರ್ಯ ಮಾಡೋಣ ಎಂದು ತಹಸೀಲ್ದಾರ ವಾಸುದೇವ ವಿ.ಸ್ವಾಮಿ ಹೇಳಿದರು.

ಅವರು ಸೋಮವಾರ ಭಕ್ತ ಕನಕದಾಸ ಜಯಂತಿ ಆಚರಿಸುವ ಪ್ರಯುಕ್ತ ತಹಸೀಲ್ದಾರ ಕಚೇರಿಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಾರ್ವಜನಿಕರನ್ನೊಳಗೊಂಡ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಸಮಾಜದ ಶ್ರೇಯೋಭಿವೃದ್ಧಿಗಾಗಿ ಸಮರ್ಪಿಸಿಕೊಂಡ ಭಕ್ತ ಕನಕದಾಸರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸೋಣ. ಸರ್ಕಾರದಿಂದ ಅನುದಾನ ಬಂದರೆ ಇನ್ನಷ್ಟು ವಿಜೃಂಭಣೆಯಿಂದ ಆಚರಿಸೋಣ ಎಂದರು.



ಸಮಾಜದ ಮುಖಂಡ ತಿಪ್ಪಣ್ಣ ಸಂಶಿ ಮಾತನಾಡಿ, ಕಳೆದ ವರ್ಷ ತಾಲೂಕಿನ ಸಮಾಜದವರು ಸೇರಿ ಜಯಂತಿ ಆಚರಣೆ ಮಾಡಿದರೆ ಸರಕಾರದಿಂದ ಯಾವುದೇ ಅನುದಾನ ಲಭ್ಯವಾಗಿಲ್ಲ. ಪಕ್ಕದ ಶಿರಹಟ್ಟಿ ತಾಲೂಕಿನಲ್ಲಿ ಆಚರಣೆಗೆ ಅನುದಾನ ಬರುತ್ತದೆ–ಯಾದರೂ, ನಮ್ಮ ತಾಲೂಕಿಗೆ ಅನುದಾನ ಲಭ್ಯವಾಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಕಾಟಾಚಾರಕ್ಕೆ ಮಹಾತ್ಮರ ಆಚರಣೆ ಆಗಬಾರದು, ಎಲ್ಲಾ ಇಲಾಖೆಯಲ್ಲಿ ಕಡ್ಡಾಯವಾಗಿ ಮಾಡಬೇಕು ಎಂದರು.

> ಇಂದಿನ ಪೂರ್ವಭಾವಿ ಸಭೆಯಲ್ಲಿ ಇಲಾಖೆಗಳ ಅಧಿಕಾರಿಗಳು ಗೈರು ಹಾಜರಾಗಿರುವ ಕುರಿತು ಮುಖಂಡರು ಆಕ್ಷೇಪ ವ್ಯಕ್ತಪಡಿಸಿದಾಗ, ಅಂತಹ ಅಧಿಕಾರಿಗಳಿಗೆ ನೋಟಿಸ್ ನೀಡಲಾಗುವದು ಎಂದು ತಹಸೀಲ್ದಾರರು ತಿಳಿಸಿದರು.

ಸಭೆಯಲ್ಲಿ ಗ್ರೇಡ್ 2 ತಹಸೀಲ್ದಾರ ಮಂಜುನಾಥ ಅಮಾಸಿ, ಕುರುಬರ ಸಂಘದ ತಾಲೂಕಾಧ್ಯಕ್ಷ ಶೇಖಣ್ಣ ಕಾಳೆ, ಗಣೇಶ ಪೂಜಾರ, ನೀಲಪ್ಪ ಶೇರಸೂರಿ, ಹನಮಂತಪ್ಪ ಹುರಕನವರ, ಹನಮಂತಪ್ಪ ಶೆರಸೂರಿ, ಪಶು ಸಂಗೋಪನಾ ಇಲಾಖೆ ಅಧಿಕಾರಿ ಎನ್.ಎಂ. ಹವಳದ, ಕೃಷಿ ಅಧಿಕಾರಿ ಚಂದ್ರು ನರಸಮ್ಮನವರ, ಕಂದಾಯ ನಿರೀಕ್ಷಕ ಬಸವರಾಜ ಕಾತ್ರಾಳ, ರೇಣುಕಾ ಹರಿಜನ, ಎಚ್.ಎಂ. ಅರಳಿಹಳ್ಳಿ ಮುಂತಾದವರಿದ್ದರು.

## ನ.23ರಿಂದ ರಾಜ್ಯಾದ್ಯಂತ ಅನಿರ್ದಿಷ್ಠಾವಧಿ ಧರಣಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ 10–15 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರು ಅಭದ್ರತೆಯಲ್ಲಿ ಜೀವನ ಸಾಗಿಸುತ್ತಿದ್ದಾರೆ. ಇಲಾಖೆಯ ದ್ವಂದ್ವ ಹಾಗೂ ಮೌಖಿಕ ಆದೇಶಗಳಿಂದ ರಾಜ್ಯದಲ್ಲಿ ಅತಿಥಿ ಉಪನ್ಯಾಸಕರು ಆತ್ಮಹತ್ಯೆ ಮಾಡಿಕೊಳ್ಳುತಿದ್ದಾರೆ.

ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯಲ್ಲಿ ಪ್ರಕಟಿಸಿದಂತೆ ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸಿ ಆದೇಶ ಹೊರಡಿಸಬೇಕು ಎಂದು ಆಗ್ರಹಿಸಿ ನ.23ರಿಂದ ರಾಜ್ಯಾದ್ಯಂತ ತರಗತಿ ಬಹಿಷ್ಕರಿಸಿ ರಾಜ್ಯದ ಎಲ್ಲಾ ಜಿಲ್ಲಾಡಳಿತ ಕಚೇರಿ ಮುಂದೆ ಅನಿರ್ದಿಷ್ಠಾವಧಿ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ರಾಜ್ಯ ಸಪ್ರದ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಡಾ. ಹನುಮಂತಗೌಡ ಆರ್.ಕಲ್ಮನಿ ತಿಳಿಸಿದರು.




ಗದುಗಿನ ಸಪ್ರದ ಕಾಲೇಜಿನಲ್ಲಿ ಗದಗ ಜಿಲ್ಲಾ ಉಪನ್ಯಾಸಕರ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡುತ್ತಿದ್ದರು.

ನಮ್ಮ ಈ ಬೇಡಿಕೆ ಈಡೇರದಿದ್ದರೆ ಡಿ.4ರಂದು ಬೆಳಗಾವಿಯಲ್ಲಿ ನಡೆಯುವ ಚಳಿಗಾಲದ ಅಧಿವೇಶನದಲ್ಲಿ ರಾಜ್ಯದ ಎಲ್ಲಾ ಅತಿಥಿ ಉಪನ್ಯಾಸಕರು ಸೇರಿ ಸರ್ಕಾರ ಲಿಖಿತವಾಗಿ ಆದೇಶ ಹೊರಡಿಸುವವರಿಗೂ ನಮ್ಮ ಹೋರಾಟ ಮುಂದುವರೆಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಅತಿಥಿ ಉಪನ್ಯಾಸಕರುಗಳಾದ ಡಾ. ಎಂ.ನಾಗಮ್ಮನವರ ಮಹಾಂತೇಶ ಕರ್ಲವಾಡ, ಎಸ್.ಎಸ್. ಸರ್ವಿ, ಶರಣಪ್ಪ ಮರೆಗುದ್ದಿ, ಡಾ.ಪರಿಮಳ ದೇಶಪಾಂಡೆ, ಡಾ.ರೇಣುಕಾ ಗುದ್ದಿನ, ಡಾ. ವಿರುಪಾಕ್ಷ ಮುಳಗುಂದ, ಶಿಲ್ಪಾ ಹಿರೇಮಠ, ಗೀತಾ ಮೇಟಿ, ಶ್ರೀದೇವಿ ದಾಸರ, ಶ್ರೀದೇವಿ ಗದುಗಿನ, ಶ್ರೀನಿವಾಸ್, ಬೇವಿನಕಭಗತಸಿಂಗ್ ನವಲೂರಕರ, ಶಾಂತಗೌಡ ಹುಲ್ಲೂರು.ಬಿ.ದೇಸಾಯಿಗೌಡರ, ಶಿವಾನಂದ ಜಟ್ಟೆನವರ, ಶರಣಪ್ಪ ಸಂಗನಾಳ, ದ್ಯಾಮಣ್ಣ ಮನಕಟ್ಟಿ, ರವಿ ಪವಾಡಶೆಟ್ಟರ, ಎಸ್.ವಿ. ಬೀಡನಾಳ, ಎಸ್. ಎಸ್. ಮಡಿವಾಳರ ಉಪಸ್ಥಿತರಿದ್ದು ಹೋರಾಟದ ಕುರಿತು ಸಲಹೆ–ಸೂಚನೆಗಳನ್ನು ನೀಡಿದರು.

## ನ. 30 ರಂದು ಕನಕದಾಸರ ಜಯಂತಿ : ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ



ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಕನಕದಾಸರ ಜಯಂತಿಯನ್ನು ನವೆಂಬರ್ 30 ರಂದು ಮುಂಜಾನೆ 8:30 ಕ್ಕೆ ನಗರದ ಹಾತಲಗೇರಿ ನಾಕಾದಲ್ಲಿ ಇರುವ ಕನಕದಾಸ ವೃತ್ತದಲ್ಲಿ ದಾಸಶ್ರೇಷ್ಠ ಕನಕದಾಸರ ಮೂರ್ತಿಗೆ ಪುಷ್ಪಾರ್ಚಣೆ ಮಾಡುವ ಮೂಲಕ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದುಕಮ್ಮನವರ ತಿಳಿಸಿದರು.

ಜಿಲ್ಲಾಡಳಿತ ಭವನದ ವಿಡಿಯೋ ಕಾನ್ಸರನ್ಸ್ ಹಾಲ್‌ನಲ್ಲಿ ಶನಿವಾರದಂದು ಕನಕದಾಸ ಜಯಂತಿ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಶಿಷ್ಟಾಚಾರದನ್ವಯ ಕಾರ್ಯಕ್ರಮದ ಆಮಂತ್ರಣ ಪತ್ರಿಕೆ ಮುದ್ರಣ ಮಾಡಿ ಹಂಚಿಕೆ ಮಾಡಬೇಕು ಹಾಗೂ ಅತಿಥಿ ಗಣ್ಯರುಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು ಎಂದು ಸೂಚಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ. ಬಿ. ಸರ್ವರಿಗೂ ಸ್ವಾಗತಿಸಿದರು.

ಸಭೆಯಲ್ಲಿ ರಾಜ್ಯ ಕುರುಬರ ಸಮಾಜದ ಜಿಲ್ಲಾ ಅಧ್ಯಕ್ಷ ಫಕೀರಪ್ಪ ಹೆಬಸೂರ, ಕುರುಬರ ಸಂಘದ ರಾಜ್ಯ ಸಹ ಕಾರ್ಯದರ್ಶಿ ಚೆನ್ನಮ್ಮ ಹುಳಕ್ಕಣ್ಣವರ, ಗದಗ ತಾಲೂಕು ಕುರುಬರ ಸಂಘದ ಅಧ್ಯಕ್ಷ ನಾಗಪ್ಪ ಗುಗ್ಗರಿ, ಕುರಬರ ಸಂಘದ ಯುವ ಘಟಕದ ಕಾರ್ಯದರ್ಶಿ ಹೇಮಂತ ಗಿಡ್ಡಹನಮನವರ, ಜಿಲ್ಲಾ ರೈತ ಸಂಘದ ಅಧ್ಯಕ್ಷ ಪ್ರಕಾಶ ಕರಿ, ಬಸವರಾಜ ಕುರಿ, ಮೈಲಾರಪ್ಪ ಹೂವಣ್ಣವರ, ರವಿ ವಗ್ಗನವರ, ರುದ್ರಪ್ಪ ಗುಳಗುಳಿ, ಸೇರಿದಂತೆ ಸಮಾಜದ ಗಣ್ಯರು, ಹಿರಿಯರು ಪಾಲ್ಗೊಂಡಿದ್ದರು.

### ಸಚಿವ ಡಾ. ಎಚ್.ಕೆ. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ ಭಾಗಿ

## ಸಹಸ್ರಾರ್ಜುನ ಮಹಾರಾಜರ ಜಯಂತ್ಯುತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಎಸ್‌ಎಸ್‌ಕೆ ಪಂಚ ಟ್ರಸ್ಟ್ ಕಮಿಟಿ, ತರುಣ ಸಂಘ, ಎಸ್‌ಎಸ್‌ಕೆ ಮಹಿಳಾ ಮಂಡಳಿ ಹಾಗೂ ಶ್ರೀ ಸಹಸ್ರಾರ್ಜುನ ಮಹಾರಾಜರ ಜಯಂತ್ಯುತ್ಸವ ಸಮಿತಿಯ ಸಹಯೋಗದಲ್ಲಿ ಶ್ರೀಸಹಸ್ರಾರ್ಜುನ ಮಹಾ ರಾಜರ ಜಯಂತ್ಯುತ್ಸವ ವನ್ನು ಅದ್ಧೂರಿಯಾಗಿ ಆಚರಿಸಲಾಯಿತು.

ಇದಕ್ಕೂ ಮುನ್ನ ಬೆಳಿಗ್ಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಹಾಗೂ ಎಸ್‌ಎಸ್‌ಕೆ ಮಹಿಳಾ ಮಂಡಳದ ಪದಾಧಿಕಾರಿಗಳ ಸಹಯೋಗದಲ್ಲಿ ಸಹಸ್ರಾರ್ಜುನ ಮಹಾರಾಜರ ತೊಟ್ಟಿಲು ಕಾರ್ಯಕ್ರಮ ಜರುಗಿತು. ಇದೇ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ ಸಹಸ್ರಾರ್ಜುನ ಮಹಾರಾಜರ ಬೆಳ್ಳಿ ಮೂರ್ತಿಗೆ ಹಾಗೂ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಶುಭ ಹಾರೈಸಿದರು.



ಹುಡ್ಕೋ ಕಾಲೋನಿಯ ಅಂಬಾಭವಾನಿ ದೇವಸ್ಥಾನದಿಂದ ಹಮ್ಮಿಕೊಂಡ ಬೈಕ್ ರ‍್ಯಾಲಿಗೆ ಉಸಿರು ಫೌಂಡೇಶನ್ ಸಂಸ್ಥಾಪಕ ಶರಣ ಪಾಟೀಲ ಚಾಲನೆ ನೀಡಿದರು. ಸಂಜೆ ಸರಾಫ್ ಬಜಾರದಲ್ಲಿರುವ ಜಗದಂಬಾ ದೇವಸ್ಥಾನದಲ್ಲಿ ಸಹಸ್ರಾರ್ಜುನ ಮಹಾರಾಜರ ಜಯಂತ್ಯುತ್ಸವಕ್ಕೆ ಗಣ್ಯ ಉದ್ಯಮಿ ಬುಡ್ಡಣ್ಣ ಹಬೀಬ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಎಸ್‌ಎಸ್‌ಕೆ ಸಮಾಜದ ಪಂಚ ಟ್ರಸ್ಟ್ ಕಮಿಟಿ ಅಧ್ಯಕ್ಷ ಫಕೀರಸಾ ಬಾಂಡಗೆ, ಉಪಾಧ್ಯಕ್ಷ ರಾಜು ಬದಿ, ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ, ಸಹ ಕಾರ್ಯದರ್ಶಿ ರವಿ ಶಿದ್ಲಿಂಗ, ಸದಸ್ಯರಾದ ಸುರೇಶಕುಮಾರ ಬದಿ, ಬಲರಾಮ ಬಸವಾ, ಎನ್. ಆರ್. ಖಟವಟೆ, ವಿಶ್ವನಾಥಸಾ ಖಟವಟೆ, ವಿಷ್ಣುಸಾ ಶಿದ್ಲಿಂಗ, ಮೋತಿಲಾಲಸಾ ಪೂಜಾರಿ, ಗಂಗಾಧರ ಹಬೀಬ, ಮಾರುತಿ ಪವಾರ, ಪರಶುರಾಮ ಬದಿ, ಗಣಪತಸಾ ಜಿತೂರಿ, ಅಂಬಾಸಾ ಖಟವಟೆ, ಅನಿಲ್ ಖಟಟವೆ, ವಿನೋಧ ಬಾಂಡಗೆ, ಶ್ರೀಕಾಂತ ಖಟವಟೆ, ಪ್ರಕಾಶ ಬಾಕಳೆ, ಉತ್ಸವ ಸಮಿತಿಯ ಚೇರ್ಮನ್ ಸುರೇಶ್‌ಕುಮಾರ ಬದಿ, ಪ್ರಕಾಶ ಖೋಡೆ, ಗೌರವ ಕಾರ್ಯದರ್ಶಿ ಅಶೋಕ ಬೇವಿನಕಟ್ಟಿ, ಸಹಗೌರವ ಕಾರ್ಯದರ್ಶಿ ಶೋಭಾ ಬಾಂಡಗೆ, ಖಜಾಂಚಿ ಬಾಬು ಬಾಕಳೆ, ತರುಣ ಸಂಘದ ವಿಶ್ವನಾಶ ಸೂಳಂಕಿ, ಮಾಧವ ಬದಿ, ಶ್ರೀಕಾಂತ ಬಾಕಳೆ, ನಾಗರಾಜ ಖೋಡೆ, ಮಹಿಳಾ ಮಂಡಳದ ಪದಾಧಿಕಾರಿಗಳು, ಸರ್ವ ಸದಸ್ಯರು ಸಮಾಜ ಬಾಂಧವರು ಉಪಸ್ಥಿತರಿದ್ದರು.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ,

ಗದಗ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ 07 ಫಲಾನುಭವಿ ಆಧಾರಿತ ಯೋಜನೆಗಳಾದ ಮೆರಿಟ್ ವಿದ್ಯಾರ್ಥಿ ವೇತನಕ್ಕಾಗಿ ಬಹುಮಾನ ಹಣ, ಶಿಶು ಪಾಲನಾ ಭತ್ಯೆ, ನಿರುದ್ಯೋಗ ಭತ್ಯೆ, ಪುನರ್ವಸತಿ ಕಾರ್ಯಕರ್ತರ ಮರಣ ಪರಿಹಾರ ನಿಧಿ, ಸಾಧನೆ ಯೋಜನೆ, ಪ್ರತಿಭೆ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆಗಳನ್ನು ಡಿ.ಬಿ.ಟಿ (ನೇರ ನಗದು ವರ್ಗಾವಣೆ) ವೇದಿಕೆಯಲ್ಲಿ ಅಳವಡಿಸಿ ಸೇವಾಸಿಂಧು ತಂತ್ರಾಂಶದ ಮೂಲಕ ಅನುಷ್ಠಾನಗೊಳಿಸಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಡಿಸೆಂಬರ್ 15 ರವರೆಗೆ ವಿಸ್ತರಿಸಲಾಗಿದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ಒಂದು ಹಾರ್ಡ್ ಪ್ರತಿಯನ್ನು ಅಗತ್ಯ ದಾಖಲಾತಿಗಳೊಂದಿಗೆ ತಮ್ಮ ವ್ಯಾಪ್ತಿಗೊಳಪಡುವ ಗ್ರಾಮ ಪಂಚಾಯತಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿ.ಆರ್.ಡಬ್ಲ್ಯೂ, ನಗರಸಭೆ/ ಪುರಸಭೆ/ ಪಟ್ಟಣ ಪಂಚಾಯತಿಯಲ್ಲಿ ಕಾರ್ಯನಿರ್ವಹಿ ಸುತ್ತಿರುವ ಯು.ಆರ್. ಡಬ್ಲ್ಯೂಗಳು ಹಾಗೂ ತಾಲೂಕು ಪಂಚಾಯತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಮ್.ಆರ್.ಡಬ್ಲ್ಯೂಗಳಲ್ಲಿ ಸಲ್ಲಿಸಬೇಕೆಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಕೆ. ಮಹಾಂತೇಶ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿಂಚಣಿ ಅದಾಲತ್

■ವಿಜಯಸಾಕ್ಷಿ ಸುದ್ದಿ, ಗದಗ

ವಿಭಾಗ ಮಟ್ಟದ ಪಿಂಚಣಿ ಅದಾಲತ್ ನ್ನು ಡಿಸೆಂಬರ್ 11 ರಂದು ಗದಗ ವಿಭಾಗೀಯ ಅಂಚೆ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಪಿಂಚಣಿದಾರರು ತಮ್ಮ ಕುಂದು ಕೊರತೆಗಳನ್ನು ಡಿಸೆಂಬರ್ 6 ರೊಳಗೆ ಸಲ್ಲಿಸಬಹುದಾಗಿದೆ ಎಂದು ಗದಗ ವಿಭಾಗೀಯ ಅಂಚೆ ಕಚೇರಿಯ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಸಹಸ್ರಾರ್ಜುನ ಜಯಂತಿ ಹಿನ್ನೆಲೆಯಲ್ಲಿ ಗಜೇಂದ್ರಗಡ ಪಟ್ಟಣದ ಎಸ್‌ಎಸ್‌ಕೆ ಸಮಾಜದಿಂದ ಸಹಸ್ರಾರ್ಜುನ ಭಾವಚಿತ್ರದ ಮೆರವಣಿಗೆ ಅದ್ಧೂರಿಯಾಗಿ ನಡೆಯಿತು. ಈ ವೇಳೆ ಸಮಾಜದ ಅಧ್ಯಕ್ಷರು, ಮುಖಂಡರು ಹಾಗೂ ಯುವಕ–ಯುವತಿಯರು ಭಾಗವಹಿಸಿದ್ದರು.

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2023–24ನೇ ಸಾಲಿನ ಜಿಲ್ಲಾ ವಲಯ ಯೋಜನೆಯಡಿ ಕುಶಲಕರ್ಮಿಗಳಿಗೆ ಉಚಿತವಾಗಿ ಹೊಲಿಗೆಯಂತ್ರ ( ಮಹಿಳೆಯರಿಗೆ ಮಾತ್ರ), ಬಡಿಗತನ, ಧೋಬಿ ಹಾಗೂ ಕ್ಷೌರಿಕ ಸುಧಾರಿತ ಉಪಕರಣಗಳಿಗಾಗಿ ಕಾರ್ಯಕ್ರಮ ದಡಿ ಪೂರೈಸಲು gadag.nic.in ವೆಬ್ ಸೈಟ್ ನಲ್ಲಿ ನವೆಂಬರ್ 21 ರಿಂದ ಡಿಸೆಂಬರ್ 10 ರವರೆಗೆ ಆನ್ ಲೈನ್ ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಗ್ರಾಮ ಪಂಚಾಯತ್ ವ್ಯಾಪ್ತಿಗೆ ಒಳಪಡುವ 18 ರಿಂದ 45 ವರ್ಷದೊಳಗಿನ ಕುಶಲಕರ್ಮಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಆನ್ ಲೈನ್ ನಲ್ಲಿ ಸಲ್ಲಿಸಿದ 1 ಪ್ರತಿ ಅರ್ಜಿ ನಮೂನೆ ಹಾಗೂ ದಾಖಲೆಗಳನ್ನು ಉಪನಿರ್ದೇಶಕರು ( ಗ್ರಾಕೈ) , ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ, ಜಿಲ್ಲಾ ಪಂಚಾಯತ್ , ಗದಗ ಈ ಕಚೇರಿಗೆ ಅಂಚೆ ಅಥವಾ ಖುದ್ದಾಗಿ ಬಂದು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 08372–220506 ಮೇಲ್ ವಿಳಾಸ ddkvigadag@gmail.com ಕೈಗಾರಿಕಾ ವಿಸ್ತರಣಾಧಿಕಾರಿಗಳ ದೂರವಾಣಿ ಸಂಖ್ಯೆ 9731094945, 8095520402 ಸಂಪರ್ಕಿಸಬಹುದಾಗಿದೆ. ದಾಖಲಾತಿಗಳು : ಫೋಟೋ, ಜಾತಿ ಪ್ರಮಾಣ ಪತ್ರ, ಗ್ರಾ ಮ ಪಂಚಾಯತ್ ದೃಢೀಕರಣ ಪತ್ರ, ಆಧಾರ್ ಕಾರ್ಡ್ ಅಥವಾ ಮತದಾರರ ಗುರುತಿನ ಚೀಟಿ, ವಿಕಲಚೇತನ ಪ್ರಮಾಣ ಪತ್ರ ( ಅನ್ವಯವಾದಲ್ಲಿ), ತರಬೇತಿ ಪ್ರಮಾಣ ಪತ್ರ (ಹೊಲಿಗೆಯಂತ್ರಕ್ಕಾಗಿ ).

### ಬೀದಿ ಬದಿ ವ್ಯಾಪಾರಸ್ಥರಿಗೆ ಹೈ-ಟೆಕ್ ತಳ್ಳುಗಾಡಿ ವಿತರಿಸಿದ ಸಚಿವ ಎಚ್.ಕೆ. ಪಾಟೀಲ

## ಬೀದಿ ಬದಿ ವ್ಯಾಪಾರಸ್ಥರು ಆರ್ಥಿಕವಾಗಿ ಸಧೃಢರಾಗಿ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಾಮಾಣಿಕ ಬಡ ಜನರು ದೇಶ ಕಟ್ಟುವ ಕಾರ್ಯದಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದು, ಬೀದಿ ಬದಿ ವ್ಯಾಪಾಸ್ಥರು ಸ್ವಾಭಿಮಾನದಿಂದ ತಮ್ಮ ಬದುಕು ಸಾಗಿಸಲು ಅನುವಾಗುವಂತೆ ಹೈ–ಟೆಕ್ ತಳ್ಳುಗಾಡಿಗಳನ್ನು ವಿತರಿಸಲಾಗುತ್ತಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ನುಡಿದರು.

ನಗರದ ಕೆ.ಎಚ್. ಪಾಟೀಲ ವೃತ್ತದಲ್ಲಿ ಭಾನುವಾರ ಬೀದಿ ಬದಿ ವ್ಯಾಪಾರಸ್ಥರಿಗೆ ಹೈ–ಟೆಕ್ ತಳ್ಳುಗಾಡಿಗಳನ್ನು ವಿತರಿಸಿ ಅವರು ಮಾತನಾಡಿ, ಶತಮಾನಗಳಿಂದ ಸಮಾಜದಲ್ಲಿ ಬಡ ಜನರನ್ನು ಅಸೂಯೆಯಿಂದ ನೋಡಲಾಗುತ್ತಿತ್ತು. ಇಂದಿರಾ ಗಾಂಧಿಯವರು ಬಡ ಜನರನ್ನು ಸ್ವಾಭಿಮಾನಿಗಳನ್ನಾಗಿಸುವ ದಿಸೆಯಲ್ಲಿ ಅನೇಕ ಯೋಜನೆಗಳನ್ನು ಜಾರಿಗೆ ತಂದರು. ಬಡ ಜನರ ಏಳಿಗೆಗಾಗಿ ಇಂದಿರಾ ಗಾಂಧಿ ಅವರು ಹಾಕಿಕೊಟ್ಟ ಕಾರ್ಯಕ್ರಮಗಳು ಇಂದಿಗೂ ಮುಂದುವರೆದಿದೆ.



ಇಂದು ಅವರ ಜನ್ಮದಿನದಂದು ಬೀದಿ ಬದಿ ವ್ಯಾಪಾರಸ್ಥರಿಗೆ ಹೈ–ಟೆಕ್ ತಳ್ಳುಗಾಡಿಗಳನ್ನು ವಿತರಿಸುತ್ತಿರುವದು ಅತ್ಯಂತ ಸಂತಸದ ಸಂಗತಿಯಾಗಿದೆ ಎಂದರು.

ಬೀದಿ ಬದಿ ವ್ಯಾಪಾರಸ್ಥರ ಅನುಕೂಲಕ್ಕಾಗಿ ನಗರದಲ್ಲಿ ಕೋಲ್ಡ್ ಸ್ಟೋರೇಜ್ ಘಟಕ ನಿರ್ಮಾಣದ ಕುರಿತ ಮನವಿಗೆ ಸ್ಪಂದಿಸಿ, ಜನೇವರಿ 19ರೊಳಗಾಗಿ ಕೋಲ್ಡ್ ಸ್ಟೋರೇಜ್ ಘಟಕವನ್ನು ನಿರ್ಮಾಣ ಮಾಡಲಾಗುವದು ಎಂದು ಸಚಿವ ಎಚ್.ಕೆ. ಪಾಟೀಲ ಬೀದಿ ಬದಿ ವ್ಯಾಪಾರಸ್ಥರಿಗೆ ಭರವಸೆಯನ್ನು ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರಿದ ಆಯುಕ್ತ ರಮೇಶ ವಟಗಲ್, ಮಾಜಿ ಶಾಸಕ ಡಿ.ಆರ್. ಪಾಟೀಲ, ನಗರ ಸಭೆ ಸದಸ್ಯರು, ಗದಗ ಜಿಲ್ಲಾ ಬೀದಿ ಬದಿ ವ್ಯಾಪಾರಸ್ಥರ ವಿವಿಧೋದ್ದೇಶಗಳ ಸಂಘದ ಪದಾಧಿಕಾರಿಗಳು, ಗಣ್ಯರು, ಬೀದಿ ಬದಿ ವ್ಯಾಪಾರಸ್ಥರು, ಸಾರ್ವಜನಿಕರು ಉಪಸ್ಥಿತರಿದ್ದರು.

> ಬೀದಿ ಬದಿ ವ್ಯಾಪಾರಸ್ಥರಿಗೆ ಸರ್ಕಾರದ ಸೌಲಭ್ಯಗಳನ್ನು ವಿತರಿಸುವಲ್ಲಿ ಜಿಲ್ಲೆಯು ಒಂದು ಹೆಜ್ಜೆ ಮುಂದೆಯೇ ಇದ್ದು, ಇದರ ಸಂಪೂರ್ಣ ಸದುಪಯೋಗ ಪಡೆದುಕೊಳ್ಳುವ ಮೂಲಕ ಆರ್ಥಿಕವಾಗಿ ಸಧೃಡರಾಗಬೇಕು. ಈ ಹೈ–ಟೆಕ್ ತಳ್ಳುಗಾಡಿಗಳಲ್ಲಿ ವ್ಯಾಪಾರಸ್ಥರು ತಮ್ಮ ತರಕಾರಿ ಶೇಖರಣೆ ಜೊತೆಗೆ ಸುರಕ್ಷಿತವಾಗಿ ಇಟ್ಟುಕೊಳ್ಳಬಹುದಾಗಿದೆ. ಇಂದು ನಗರದ 145 ಬೀದಿ ಬದಿ ವ್ಯಾಪಾರಸ್ಥರಿಗೆ ಹೈ–ಟೆಕ್ ತಳ್ಳುಗಾಡಿಗಳನ್ನು ವಿತರಿಸಲಾಗಿದ್ದು, ಬಾಕಿ ಫಲಾನುಭವಿಗಳಿಗೆ ಬರುವ ಜನೇವರಿ ಅಂತ್ಯದೊಳಗಾಗಿ ವಿತರಿಸಲಾಗುವದು ಎಂದು ಸಚಿವರು ಭರವಸೆ ನೀಡಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka